# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 119 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 20–11–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 119 | Title- Code: KARKAN 28269 | Chitradurga | Date: 20-11-2023 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಟಿಪ್ಪು ಸೇವಾ ಕಾರ್ಯ ಎಲ್ಲರಿಗೂ ಮಾದರಿ: ಶಾಸಕ ರಘುಮೂರ್ತಿ 2

ನಂಬಿಕೆ ಪ್ರಾಮಾಣಿಕತೆಯಿಂದ ಈ ಕ್ಷೇತ್ರ ಉಳಿವು ಸಾಧ್ಯ: ನವೀನ್ 3

ಒಕ್ಕಲಿಗ ಜಪ ಮಾಡುವ ಕುಂಚಿಟಿಗ ಮುಖಂಡರ ಬಗ್ಗೆ ಎಚ್ಚರವಹಿಸಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಧರ್ಮಪುರದಲ್ಲಿ ನ. 27 ರಂದು ಜಿಲ್ಲಾ ಉಸ್ತುವಾರಿ ಸಚಿವರಿಂದ ಜನತಾದರ್ಶನ

» **ಚಿತ್ರದುರ್ಗ**

ಇದೇ ನ. 27 ರಂದು ಹಿರಿಯೂರು ತಾಲ್ಲೂಕು ಧರ್ಮಪುರ ಗ್ರಾಮದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರಿಂದ ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಸಾರ್ವಜನಿಕರ ಕುಂದುಕೊರತೆಗಳು ಸ್ಥಳೀಯ ಮಟ್ಟದಲ್ಲಿ ನಿವಾರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಸೂಚನೆಯಂತೆ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ಜಿಲ್ಲಾ ಮಟ್ಟದ ಜನತಾದರ್ಶನ ಏರ್ಪಡಿಸಲಾಗುತ್ತಿದ್ದು, ಈ ಬಾರಿ ಜಿಲ್ಲಾ ಮಟ್ಟದ ಜನತಾದರ್ಶನ ನ. 27 ರಂದು ಬೆಳಿಗ್ಗೆ 10 ಗಂಟೆಗೆ ಹಿರಿಯೂರು ತಾಲ್ಲೂಕಿನ ಧರ್ಮಪುರ ಗ್ರಾಮದ ಮುಖ್ಯ ರಸ್ತೆಯಲ್ಲಿರುವ ವಾಸವಿ ಮಹಲ್‌ನಲ್ಲಿ ಏರ್ಪಡಿಸಲಾಗಿದೆ. ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು, ಜನಪ್ರತಿನಿಧಿಗಳು ಜನತಾದರ್ಶನದಲ್ಲಿ ಉಪಸ್ಥಿತರಿರುವರು. ಸಾರ್ವಜನಿಕರಿಂದ ಅರ್ಜಿಗಳನ್ನು ಪಡೆದು, ಸ್ವೀಕೃತಿ ನೀಡುವ ಸಲುವಾಗಿ ಸಮರ್ಪಕ ರೀತಿಯಲ್ಲಿ ಕೌಂಟರ್ ಗಳ ವ್ಯವಸ್ಥೆ ಮಾಡಲಾಗುವುದು. ಸಾರ್ವಜನಿಕರು ತಮ್ಮ ಕುಂದುಕೊರತೆ ಕುರಿತ ಅಹವಾಲು, ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದ್ದಾರೆ.

### ನ. 21, 29 ರಂದು ಜಿಲ್ಲಾಧಿಕಾರಿಗಳಿಂದ ತಾಲ್ಲೂಕು ಮಟ್ಟದ ಜನತಾದರ್ಶನ

» **ಚಿತ್ರದುರ್ಗ**

ಇದೇ ನ. 21 ರಂದು ಹೊಸದುರ್ಗ ತಾಲ್ಲೂಕು ಅತ್ತಿಮಗ್ಗೆ ಗ್ರಾಮ ಹಾಗೂ ನ. 29 ರಂದು ಚಿತ್ರದುರ್ಗ ತಾಲ್ಲೂಕು ಕುರುಮರಡಿಕೆರೆ ಗ್ರಾಮದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಾಲ್ಲೂಕು ಮಟ್ಟದ ಜನತಾದರ್ಶನ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸ್ಥಳೀಯವಾಗಿ ಜನರ ಸಮಸ್ಯೆಗಳಿಗೆ ಅಧಿಕಾರಿಗಳು ಸ್ಪಂದಿಸುವಂತಾಗಲು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ತ್ವರಿತವಾಗಿ ನಿವಾರಿಸುವ ಸಲುವಾಗಿ ಪ್ರತಿ ತಿಂಗಳು ಹದಿನೈದು ದಿನಗಳಿಗೊಮ್ಮೆ ಜಿಲ್ಲಾಧಿಕಾರಿಗಳು ತಾಲ್ಲೂಕುಮಟ್ಟದಜನತಾದರ್ಶನಏರ್ಪಡಿಸುವಂತೆ ಸರ್ಕಾರ ನಿರ್ದೇಶನ ನೀಡಿದ್ದು, ಇದರನ್ವಯ ನ. 21 ರಂದು ಬೆಳಿಗ್ಗೆ 10 ಗಂಟೆಗೆ ಹೊಸದುರ್ಗ ತಾಲ್ಲೂಕು ಅತ್ತಿಮಗ್ಗೆ ಗ್ರಾಮದ ಆಂಜನೇಯ ಸ್ವಾಮಿ ದೇವಸ್ಥಾನ ಆವರಣದಲ್ಲಿ ಹಾಗೂ ನ. 29 ರಂದು ಬೆ. 10 ಗಂಟೆಗೆ ಚಿತ್ರದುರ್ಗ ತಾಲ್ಲೂಕು ಇಂಗಳದಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಕುರುಮರಡಿಕೆರೆ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆ ಆವರಣದಲ್ಲಿ ತಾಲ್ಲೂಕು ಮಟ್ಟದ ಜನತಾದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಾಲ್ಲೂಕು ಮಟ್ಟದ ಜನತಾದರ್ಶನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದು, ವಿವಿಧ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಸಾರ್ವಜನಿಕರಿಂದ ಅರ್ಜಿಗಳನ್ನು ಪಡೆದು, ಸ್ವೀಕೃತಿ ನೀಡುವ ಸಲುವಾಗಿ ಸಮರ್ಪಕ ರೀತಿಯಲ್ಲಿ ಕೌಂಟರ್ ಗಳ ವ್ಯವಸ್ಥೆ ಮಾಡಲಾಗುವುದು. ಸಾರ್ವಜನಿಕರು ತಮ್ಮ ಕುಂದುಕೊರತೆ ಕುರಿತ ಅಹವಾಲು, ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದ್ದಾರೆ.

### ಕ್ಷೇಮಾಭಿವೃದ್ಧಿ ಸಂಘ ಅಸ್ಥಿತ್ವಕ್ಕೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಡಿ.ಸಿ.ಸಿ. ಬ್ಯಾಂಕ್ ಕಾಲೋನಿಯ ನಿವಾಸಿಗಳ ಕ್ಷೇಮಾಭೀವೃದ್ಧಿ ಸಂಘ ಅಸ್ಥಿತ್ವಕ್ಕೆ ಬಂದಿದ್ದು, ಅಧ್ಯಕ್ಷರಾಗಿ ಪಿ.ರಾಜಪ್ಪ, ಕಾರ್ಯದರ್ಶಿಯಾಗಿ ಎಸ್.ಜಿ.ಸತ್ಯನಾರಾಯಣ ಮತ್ತು ಖಂಜಾಚಿಯಾಗಿ ಎಸ್.ಕೆ.ಆರ್. ಮುರಳಿಬಾಬು ಇತ್ತೀಚೆಗೆ ನಡೆದ ಸಾಮಾನ್ಯ ಸಭೆಯಲ್ಲಿ ಆಯ್ಕೆಯಾಗಿದ್ದಾರೆ. ಉಳಿದಂತೆ ಗೌರವ ಆಧ್ಯಕ್ಷರಾಗಿ ಎ.ನಾಗರಾಜ್, ಉಪಾಧ್ಯಕ್ಷರಾಗಿ ಎನ್.ಜಿ.ಶ್ರೀನಿವಾಸರೆಡ್ಡಿ,ಶ್ರೀಮತಿಜಿ.ಸಿ.ಸರೋಜಮ್ಮ, ಸಂಘಟನಾ ಕಾರ್ಯದರ್ಶಿಯಾಗಿ ಪಿ.ಲಂಕೇಶ್, ಸಾಂಸ್ಕೃತಿಕ ಕಾರ್ಯದರ್ಶಿಯಾಗಿ ತಿಪ್ಪೇಸ್ವಾಮಿ, ಸಹ ಕಾರ್ಯದರ್ಶಿಯಾಗಿ ಶ್ರೀಮತಿ ಜಿ.ಪಿ.ಆಶಾ ನೇಮಕವಾಗಿದ್ದಾರೆ ಎಂದು ತಿಳಿಸಿದರು.

---

**ಕಾಂಗ್ರೆಸ್ ಪಕ್ಷದ ಸರ್ವಶಕ್ತಿಯಾಗಿ ಹೊರಹೊಮ್ಮಿದವರು ಇಂದಿರಾಗಾಂಧಿಯವರು**

# ದೇಶದ ಸುಭದ್ರತೆ, ಆರ್ಥಿಕತೆ, ಬಡತನ ನಿರ್ಮೂಲನೆ ಪಕ್ಷದ ಆದ್ಯತೆ: ರಘುಮೂರ್ತಿ

» **ಚಳ್ಳಕೆರೆ**

ಕಾಂಗ್ರೆಸ್ ಪಕ್ಷದ ನೆಚ್ಚಿನ ಮಾಜಿಪ್ರಧಾನಿ, ರಾಷ್ಟ್ರದ ಮೊಟ್ಟಮೊದಲ ಮಹಿಳಾ ಪ್ರಧಾನಿ ಎಂಬ ಖ್ಯಾತಿಗೆ ಒಳಗಾಗಿದ್ದ ದಿವಂಗತ ಇಂದಿರಾಗಾಂಧಿಯವರ 106ನೇ ಜನ್ಮದಿನವನ್ನು ನಾವೆಲ್ಲರೂ ಸಂಭ್ರಮ, ಸಡಗರಗಳಿಂದ ಆಚರಣೆ ಮಾಡುತ್ತಿದ್ದು, ಇಂದಿರಾಗಾಂಧಿಯವರ ಆದರ್ಶಗಳು ನಮ್ಮೆಲ್ಲರಿಗೂ ಮಾರ್ಗದರ್ಶನವೆಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಶಾಸಕರ ಭವನದಲ್ಲಿ ದಿವಂಗತ ಇಂದಿರಾಗಾಂಧಿಯವರ 106ನೇ ಜನ್ಮದಿನ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಸ್ವಾತಂತ್ರ್ಯ ಪೂರ್ವ ಮತ್ತು ಸ್ವಾತಂತ್ರ್ಯ ನಂತರ ರಾಷ್ಟ್ರ ಕಟ್ಟುವ ಕಾರ್ಯದಲ್ಲಿ ನೆಹರೂ ಕುಟುಂಬದ ಕೊಡುಗೆ ಅಪಾರವಾಗಿದೆ. ರಾಷ್ಟ್ರ ಮೊಟ್ಟಮೊದಲ ಪ್ರಧಾನಮಂತ್ರಿ ದಿವಂಗತ ಜವಹರಲಾಲ್ ನೆಹರೂರವರ



ಪುತ್ರಿಯಾದ ಇಂದಿರಾಗಾಂಧಿಯೂ ಸಹ ದೇಶವನ್ನು ಸಮರ್ಥವಾಗಿ ನಿಬಾಯಿಸಿದವರು. 20 ಅಂಶಗಳ ಕಾರ್ಯಕ್ರಮ ಗರೀಬಿ ಹಠಾವೋ, ಉಳುವವನೇ ಭೂಮಿಯ ಒಡೆಯ ಇಂತಹ ಕ್ರಾಂತಿಕಾರಿ ಕಾನೂನುಗಳನ್ನು ಜಾರಿಗೆ ತಂದು ಬಡ ಜನತೆಯ ಸುರಕ್ಷತೆಗೆ ಇಂದಿರಾಗಾಂಧಿಯವರ ಭದ್ರ ಅಡಿಪಾಯ ಹಾಕಿದರು. ಕಾಂಗ್ರೆಸ್ ಪಕ್ಷದ ಸರ್ವಶಕ್ತಿಯಾಗಿ ಹೊರಹೊಮ್ಮಿದ್ದರು ಎಂದರು.ಕುಶಲಕರ್ಮಿ ವಿಭಾಗದ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್ ಮಾತನಾಡಿ, ದೇಶದಲ್ಲಿ ನಿರಂತರ ಬರಗಾಲ ತಾಂಡವಾಡುತ್ತಿತ್ತು, ಜನರು ಹೊಟ್ಟೆಗೆ ತಿನ್ನಲು ರಾಷ್ಟ್ರದಲ್ಲಿ ಆಹಾರದ ಕೊರತೆ ಎದ್ದು ಕಾಣುತ್ತಿತ್ತು. ರೈತರೂ ಸಹ ಜಮೀನುಗಳಲ್ಲಿ ಬೆಳೆ ಬೆಳೆಯದೆ ಕಂಗಾಲಾಗಿದ್ದರು. ಇಡೀ ದೇಶವೇ ಹಸಿವಿನಿಂದ ಕಂಗೆಟ್ಟಿತ್ತು. ಇಂತಹ ಸಂದರ್ಭದಲ್ಲಿ ಪ್ರತಿಯೊಬ್ಬ ಪ್ರಜ್ಞೆಯೂ ತನ್ನ ಹಸಿವನ್ನು ನೀಗಿಸಿಕೊಳ್ಳಲು ಸರ್ಕಾರದತ್ತ ದೃಷ್ಠಿಹಾಯಿಸಿದ್ದ ಸಂದರ್ಭದಲ್ಲಿ ಇಂದಿರಾಗಾಂಧಿಯವರು ಕೆಂಪುಜೋಳ ತಂದು ಅದನ್ನು ಬಡ ಜನರಿಗೆ ಹಂಚಿ ಕೋಟಿ, ಕೋಟಿ ಜನರ ಹಸಿವಿಗೆ ಆಸರೆಯಾದರು. ಇಂತಹ ಮಹಾನ್ ಶಕ್ತಿ ಕಾಂಗ್ರೆಸ್ ಪಕ್ಷದ ಬೆನ್ನೆಲುಬಾಗಿದ್ದು ನಾವೆಲ್ಲರೂ ಇಂದಿರಾಗಾಂಧಿಯವರ ಆದರ್ಶಗಳ ಪ್ರೇರಣೆ ಪಡೆಯೋಣವೆಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಎಚ್.ಎಸ್.ಸೈಯದ್, ಟಿ.ಆರ್. ಕಿರಣ್‌ಶಂಕರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಶಶಿಧರ, ಜಿಲ್ಲಾ ಪಂಚಾಯಿತಿ ಕೆಡಿಪಿ ನಾಮಿನಿ ಸದಸ್ಯ ಓ.ರಂಗಸ್ವಾಮಿ(ತಬಲ), ಬಡಗಿಪಾಪಣ್ಣ, ಶಿವಕುಮಾರಸ್ವಾಮಿ, ಮೈಲಾರಪ್ಪ, ನಗರಸಭಾ ಸದಸ್ಯ ರಮೇಶ್‌ಗೌಡ, ಅನ್ವರ್‌ಮಾಸ್ಟರ್ ಉಪಸ್ಥಿತರಿದ್ದರು.

---

# ಭಾರತದಲ್ಲಿ ಕ್ರೀಡಾಪಟುಗಳಿಗೆ ಹೆಚ್ಚಿನ ಪ್ರೀತಿ ತೋರುವ ಅಭಿಮಾನಿಗಳಿದ್ದಾರೆ: ಉದ್ಯಮಿ ಡಿ.ಎಸ್.ಪ್ರದೀಪ್

» **ಹೊಸದುರ್ಗ**

ಅನ್ನ ನೀಡುವ ರೈತ, ದೇಶ ಕಾಯುವ ಸೈನಿಕ, ದೇಶಕ್ಕಾಗಿ ಆಟವಾಡುವ ಕ್ರೀಡಾಪಟುಗಳನ್ನು ಅತ್ಯಂತ ಪ್ರೀತಿಯಿಂದ ಅಭಿಮಾನದಿಂದ ಕಾಣುವ ಅಭಿಮಾನಿಗಳು ಭಾರತದಲ್ಲಿದ್ದಾರೆಂದು ಸದ್ಗುರು ಆಯುರ್ವೇದ ಸಂಸ್ಥೆ ಮಾಲೀಕ, ಉದ್ಯಮಿ ಡಿ.ಎಸ್.ಪ್ರದೀಪ್ ತಿಳಿಸಿದರು.

ನಗರದ ಪುರಸಭೆ ಮುಂಭಾಗದ ಗಣೇಶ ದೇವಸ್ಥಾನದಲ್ಲಿ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾರತದ ಗೆಲುವಿಗಾಗಿ ಪೂಜೆ ಸಲ್ಲಿಸಿ ಮಾತನಾಡಿದ ಅವರು ಭಾರತ ಕ್ರಿಕೆಟ್ ತಂಡದ ಆಟಗಾರರು ಅತ್ಯಂತ ಅನುಭವ ತರಬೇತಿದಾರ ರಾಹುಲ್ ದ್ರಾವಿಡ್ ರವರ ಗರಡಿಯಲ್ಲಿ ಪಳಗಿದ್ದು ಈ ಬಾರಿ ಕಪ್ ನಮ್ಮದೇ, ಎಂದರು. ಪುರಸಭಾ ಮಾಜಿ ಅಧ್ಯಕ್ಷ ಎಂ,ಶ್ರೀನಿವಾಸ್ ಪಾತನಾಡಿ ಭಾರತದ ಪ್ರಜೆಗಳಾದ ನಾವು ಎಂತಹ ಸಂದರ್ಭದಲ್ಲಿಯಾದರು ದೇಶದ ಪರವಾಗಿ ನಿಲ್ಲುವ ಬೆಳೆಸಿಕೊಳ್ಳಬೇಕು, ಕ್ರಿಕೆಟನ್ನು



ಎಲ್ಲರೂ ಮನರಂಜನೆಗಾಗಿ ನೋಡಬೇಕು, ದೇಶಾಭಿಮಾನ ಬಳಸಿಕೊಳ್ಳುವ ಯುವ ಪೀಳಿಗೆ ಮುಂದೆ ಬಂದಾಗ ಯಾವುದೇ ಸಂದರ್ಭದಲ್ಲಿ ದೇಶ ಬಲಿಷ್ಠವಾಗಿ ನಿಲ್ಲಬಲ್ಲದು ಎಂದರು. ನಗರದ ಪುರಸಭಾ ಸದಸ್ಯರು ನಾಗರಿಕರು ಭಾರತದ ಗೆಲುವಿಗಾಗಿ ಗಣೇಶ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಪ್ರಾರ್ಥಿಸಿರುವುದು ಅತ್ಯಂತ ಸಂತೋಷ ದಾಯಕ ಸಂಗತಿ ಎಂದರು. ಕಾರ್ಯಕ್ರಮದಲ್ಲಿ ಟಿ ಎ ಪಿ ಎಂ ಎಸ್ ಅಧ್ಯಕ್ಷ ಕಾರೆಹಳ್ಳಿ ಬಸವರಾಜ್, ಪಿ ಐ ತಿಮ್ಮಪ್ಪ, ,ಪುರಸಭಾ ಮುಖ್ಯಧಿಕಾರಿ ತಿಮ್ಮರಾಜು,ಪುರಸಭಾ ಸದಸ್ಯರಾದ ದಾಳಿಂಬೆ ಗಿರೀಶ್, ಜಾಫರ್ ಸಾಧಿಕ್, ಡಾ. ಸ್ವಾತಿ ಪ್ರದೀಪ್, ಕೆ ಎಲ್ ನಾಗರಾಜ್, ರಾಮಚಂದ್ರಪ್ಪ, ಡಾ. ಸ್ವಾತಿ ಪ್ರದೀಪ್, ದೊಡ್ಡಯ್ಯ, ಮೇಘ ರಾಮಚಂದ್ರಪ್ಪ, ಮಂಜುನಾಥ್, ಮಾಜಿ ಪುರಸಭಾ ಸದಸ್ಯರಾದ ಮಂಜುನಾಥ್ ಕರೀಮ್ ಮುಲ್ಲಾ, ಮಾಚೇನಹಳ್ಳಿ ರಾಮ್ಕಿ,ತುಂಬಿನಕೆರೆ ಬಸವರಾಜ್, ಹಾಗೂ ಕ್ರೀಡಾಭಿಮಾನಿಗಳು ಪಾಲ್ಗೊಂಡಿದ್ದರು.

# ಮಧುಮೇಹಿಗಳಿಗೆ ಕಣ್ಣಿನ ದೋಷಕ್ಕೆ ಲೇಸರ್ ಚಿಕಿತ್ಸೆ



» **ಚಿತ್ರದುರ್ಗ**

ಮಧುಮೇಹಿಗಳ ಕಣ್ಣಿನ ದೋಷಕ್ಕೆ ಲೇಸರ್ ಚಿಕಿತ್ಸೆ ಶಿಬಿರ ನಡೆಸಲಾಗುತ್ತಿದ್ದು, ಪ್ರತಿ ತಿಂಗಳು ಎರಡನೇ ಶುಕ್ರವಾರ ಜಿಲ್ಲಾಆಸ್ಪತ್ರೆ ಕೊಠಡಿ ಸಂಖ್ಯೆ 51ರಲ್ಲಿ ಶಿಬಿರ ನಡೆಯಲಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ತಿಳಿಸಿದರು.

ಪುಟ ↘ 2

---

## ಪ್ರಮುಖ ಸುದ್ದಿ

**ಕನ್ನಡ ರಾಜ್ಯೋತ್ಸವದ ಆಚರಣೆ ಮತ್ತು ಮಯೂರ ವರ್ಮನ ಶಾಸನ ಮಾಹಿತಿ ನೀಡುವ ಕಾರ್ಯಕ್ರಮಕ್ಕೆ ಎಡಿಸಿ ಚಾಲನೆ**


# ಇತಿಹಾಸ ಅರಿತಾಗ ಮಾತ್ರ ಇತಿಹಾಸ ನಿರ್ಮಾಣ

» **ಚಿತ್ರದುರ್ಗ**

ಇಂದಿನ ದಿನಮಾನದಲ್ಲಿ ಐಟಿ. ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಇತಿಹಾಸ ಮರೆಯಾಗುತ್ತಿದೆ. ಯಾವೂತ್ತು ಸಹಾ ನಮ್ಮ ಇತಿಹಾಸವನ್ನು ಮರೆಯಬಾರದು, ಇದರ ನೆನಪಿಗಾಗಿ ಈ ರೀತಿಯ ಕಾರ್ಯಕ್ರಮಗಳು ಅಗತ್ಯವಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳಾದ ಕುಮಾರಸ್ವಾಮಿ ಅಭೀಪ್ರಾಯಪಟ್ಟಿದ್ದಾರೆ.

ಚಿತ್ರದುರ್ಗ ನಗರದ ಚಂದ್ರವಳ್ಳಿಯಲ್ಲಿಯ ಹುಲೇಗೊಂದಿ ಸಿದ್ದೇಶ್ವರ ದೇವಾಲಯದ ಆವರಣದಲ್ಲಿ ಭಾನುವಾರ ಕನ್ನಡ ರಾಜ್ಯೋತ್ಸವದ ಆಚರಣೆ ಮತ್ತು ಮಯೂರ ವರ್ಮನ ಶಾಸನದ ಬಗ್ಗೆ ಮಾಹಿತಿ ನೀಡುವ ಕಾರ್ಯಕ್ರಮಕ್ಕೆ ಮೂಯೂರ ವರ್ಮನ ಶಾಸನಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಇಂದಿನ ದಿನಮಾನದಲ್ಲಿ ಬಹತೇಕ ಜನತೆ ತಮ್ಮ ಮಕ್ಕಳನ್ನು ಆಂಗ್ಲ ಭಾಷಾ ಶಾಲೆಗೆ ಕಳುಹಿಸುವುದರ ಮೂಲಕ ಕನ್ನಡ ಭಾಷೆಯನ್ನು ಮರೆಯುತ್ತಿದ್ದಾರೆ. ಇಂದಿನ ಮಕ್ಕಳು ಮತ್ತು ಪೋಷಕರು ಸಹಾ ಕೆಲಸಕ್ಕಾಗಿ ಅಂಕಗಳಿಗಾಗಿ ಅಭ್ಯಾಸವನ್ನು ಮಾಡುವಂತ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ವಿಷಾಧಿಸಿದರು.

ಕನ್ನಡ ರಾಜ್ಯೋತ್ಸವವನ್ನು ಬರೀ



ನವಂಬರ್‌ನಲ್ಲಿ ಮಾತ್ರವೇ ಮಾಡದೇ ವರ್ಷದ 365 ದಿನವೂ ಸಹಾ ಮಾಡಬೇಕಿದೆ ಆಗ ಮಾತ್ರ ನಮ್ಮ ಭಾಷೆ ಬೆಳೆಯಲು ಸಾಧ್ಯವಾಗಿದೆ. ಇತಿಹಾಸವನ್ನು ಅರಿತಾಗ ಮಾತ್ರ ಇತಿಹಾಸವನ್ನು ನಿರ್ಮಾಣ ಮಾಡಲು ಸಾಧ್ಯವಿದೆ. ಕನ್ನಡದ ಬಗ್ಗೆ ಚಿಂತನೆ ನಡೆಯಬೇಕಿದೆ. ಪಾಶ್ಚಿಮಾತ್ಯರ ಧಾಳಿಯಿಂದಾಗಿ ನಮ್ಮಲ್ಲಿ ಆಂಗ್ಲ ಭಾಷೆ ನೆಲೆಯೂರಿದೆ. ಕನ್ನಡದ ಭಾಷೆಯನ್ನು ಹಿಂದಕ್ಕೆ ಇಕ್ಕಿದೆ. ಈ ರೀತಿಮ ಆಗಬಾರದು ಎಲ್ಲರು ಕನ್ನಡ ಭಾಷೆಯನ್ನು ಪ್ರೀತಿಸಿ, ಮಾತನಾಡಬೇಕಿದೆ. ಆಗ ಮಾತ್ರ ನಮ್ಮ ಭಾಷೆ ಬೆಳೆಯಲು ಸಾಧ್ಯವಿದೆ. ಇದು ಒಬ್ಬರ ಕೆಲಸವಲ್ಲಿ ಎಲ್ಲರು ಸೇರಿ ಮಾಡಬೇಕಾದ ಕೆಲಸವಾಗಿದೆ ಎಂದು ಕುಮಾರಸ್ವಾಮಿ ತಿಳಿಸಿದರು.

ವಿಶ್ರಾಂತ ಕನ್ನಡ ಪ್ರಾಧ್ಯಾಪಕರು, ಶಾಸನ ಇತಿಹಾಸ ಸಂಶೋಧಕರಾದ ಡಾ.ಬಿ.ರಾಜಶೇಖರಪ್ಪ ಮಯೂರ ವರ್ಮನ ಶಾಸನದ ಬಗ್ಗೆ ಮಾತನಾಡಿ, ನಮ್ಮ ಚಂದ್ರವಳ್ಳಿಯಲ್ಲಿ ಸಿಕ್ಕಿರುವ ಈ ಶಾಸನದಿಂದ ಕನ್ನಡ ರಾಜರು, ತಮ್ಮ ಆಡಳಿತವನ್ನು ಪ್ರಾರಂಭ ಮಾಡಿರುವ ಬಗ್ಗೆ ಮಾಹಿತಿಯನ್ನು ನೀಡುತ್ತದೆ. ಇಲ್ಲಿ ಕದಂಬ ರಾಜರು ತಮ್ಮ ಆಳ್ವಿಕೆಯನ್ನು ಪ್ರಾರಂಭ ಮಾಡಿರುವ ಮಾಹಿತಿಯನ್ನು ಸಹಾ ನೀಡಿದ್ದು ಇದು ಪ್ರಥಮವಾದ ಶಾಸನವಾಗಿದೆ. ಈ ಶಾಸನದ ಬಗ್ಗೆ ಹಲವಾರು ವಿದ್ವಾಂಸರು ವಿವಿಧ ರೀತಿಯಲ್ಲಿ ವಾಖ್ಯಾನ ಮಾಡಿದ್ದಾರೆ ಮೂಲದಲ್ಲಿ ಇದು ಸಂಸ್ಕೃತದಲ್ಲಿದೆ. ಮಯೂರಶರ್ಮನಾದವನು ಮಯೂರು ವರ್ಮ ಯಾವ ರೀತಿ ಆದ ಅದರ ಬಗ್ಗೆ ಇತಿಹಾಸದಲ್ಲಿ ತಿಳಿಸಲಾಗಿದೆ ಎಂದರು.

ಮೂಲದಲ್ಲಿ ಬ್ರಾಹ್ಮಣನಾದ ಮಯೂರ ಶರ್ಮ ತನಗೆ ಆದ ಅವಮಾನದಿಂದಾಗಿ ಸೈನ್ಯವನ್ನು ಕಟ್ಟುವುದರ ಮೂಲಕ ಪಲ್ಲವರ ಮೇಲೆ ಧಾಳಿಯನ್ನು ಮಾಡುವುದರ ಮೂಲಕ ಅವರ ರಾಜ್ಯದ ಕೆಲ ಪ್ರದೇಶಗಳನ್ನು ವಶಪಡಿಸಿಕೊಂಡನು ಇದರಿಂದ ವಿಚಲಿತರಾದ ಪಲ್ಲವರು ಮಯೂರ ವರ್ಮನನ್ನು ಗೆಳೆಯನನ್ನಾಗಿ ಮಾಡಿಕೊಂಡು ಅವನಿಗೆ ರಾಜನಾಗಿ ಪಟ್ಟಾಭೀಷೇಕ ಮಾಡುವುದರ ಮೂಲಕ ಕಂದಬ ರಾಜ ಆಡಳಿತವನ್ನು ಪ್ರಾರಂಭ ಮಾಡಿದರು. ಆಡಳಿತವನ್ನು ನಡೆಸುವ ರಾಜನ ಭಾಷೆ ಅಲ್ಲಿ ಹೆಚ್ಚಾಗಿ ಪ್ರಾತಿನೀಧ್ಯ ಪಡೆಯುತ್ತದೆ ಈ ಹಿನ್ನಲೆಯಲ್ಲಿ ಮಯೂರ ವರ್ಮ ಕನ್ನಡದ ರಾಜನಾಗಿದ್ದರಿಂದ ಇಲ್ಲಿ ಕನ್ನಡ ಭಾಷೆ, ಕಲೆ, ಸಂಸ್ಕೃತಿ, ಬೆಳೆಯಲು ಸಾಧ್ಯವಾಯಿತು. ಈ ಶಾಸನವು 1929ರಲ್ಲಿ ಕೃಷ್ಣಾರವರು ಓದಿದರು. ಇದನ್ನು ಅಧ್ಯಯನ ಮಾಡಿ ಇದರಲ್ಲಿ ಇರುವುದನ್ನು ತಿಳಿಸಿದರು, 1931ರ ವಾರ್ಷಿಕ ವರದಿಯಲ್ಲಿ ಇದು ಮಂಡನೆಯಾಗಿದೆ. ಇದ ನಂತರ 1983–84ರಲ್ಲಿ ನಾನು ಇದರ ಬಗ್ಗೆ ಅಧ್ಯಯನ ಮಾಡಿ ಇದು ಸಂಸ್ಕೃತ ಭಾಷೆಯಲ್ಲಿದೆ ಎಂದು ತಿಳಿಸಿ ಅದರ ಅರ್ಥವನ್ನು ತಿಳಿಸಿದ್ದೇನೆ ಎಂದು ರಾಜಶೇಖರಪ್ಪ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ನಗರಸಭೆಯ ಮಾಜಿ ಅಧ್ಯಕ್ಷರಾದ ಬಿ.ಕಾಂತರಾಜ್ ಮಾತನಾಡಿ, ಈ ಕಾರ್ಯಕ್ರಮವೂ ಸಣ್ಣಧಾದರೂ ಸಹಾ ಉತ್ತಮವಾದ ಕಾರ್ಯಕ್ರಮವಾಗಿದೆ, ಈ ಕಾರ್ಯಕ್ರಮವನ್ನು ಈ ವರ್ಷದಿಂದ ಪ್ರಾರಂಭ ಮಾಡಿದ್ದು ಮುಂದಿನ ದಿನದಲ್ಲಿ ಪ್ರತಿ ವರ್ಷವೂ ಸಹಾ ನಡೆಸಲಾಗುವುದು. ಚಿತ್ರದುರ್ಗಕ್ಕೆ ಮಯೂರ ವರ್ಮನ ಕೂಡುಗೆ ಆಪಾರವಾಗಿದೆ. ಚಿತ್ರದುರ್ಗದ ಇತಿಹಾಸದ ಬಗ್ಗೆ ತಿಳಿಯುವುದು ಇನ್ನೂ ಬಹಳ ಇದೆ ಈ ರೀತಿಯ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ತಿಳಿಯಬೇಕಿದೆ ಎಂದರು.

## ಫಾಸ್ಟ್ ನ್ಯೂಸ್

### ಮಧುಮೇಹಿಗಳಿಗೆ ಕಣ್ಣಿನ ದೋಷಕ್ಕೆ ಲೇಸರ್ ಚಿಕಿತ್ಸೆ

» ಮೊದಲ ಪುಟದಿಂದ

ಜಿಲ್ಲಾ ಆಸ್ಪತ್ರೆಯಲ್ಲಿ ಶನಿವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಠಲ ಆಸ್ಪತ್ರೆ ಇವರ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಡಯಾಬೆಟಿಕ್ ರೆಥೆನೋಪತಿ ಶಿಬಿರದಲ್ಲಿ ಅವರು ಮಾತನಾಡಿದರು. ಡಯಾಬಿಟಿಕ್ ರೆಟಿನೋಪ ತಿಯು ಮಧುಮೇಹದ ಪರಿಣಾಮವಾಗಿ ರೆಟಿನಾಕ್ಕೆ (ಕಣ್ಣಿನ ಹಿಂಭಾಗದಲ್ಲಿರುವ ಪಾರದರ್ಶಕ, ಬೆಳಕು-ಸೂಕ್ಷ್ಮ ರಚನೆ) ಹಾನಿಯಾಗಿದೆ. ರೆಟಿನಾದಲ್ಲಿನ ರಕ್ತನಾಳಗಳು ರಕ್ತ ಮತ್ತು ದ್ರವವನ್ನು ಸೋರಿಕೆ ಮಾಡಬಹುದು. ಹೊಸ ರಕ್ತನಾಳಗಳು ಬೆಳವಣಿಗೆಯಾಗಬಹುದು, ಕೆಲವೊಮ್ಮೆ ರಕ್ತಸ್ರಾವ, ಗಾಯದ ರಚನೆ ಅಥವಾ ರೆಟಿನಾದ ಬೇರ್ಪಡುವಿಕೆಗೆ ಕಾರಣವಾಗುತ್ತದೆ ಎಂದರು. ಜಿಲ್ಲಾ ಆಸ್ಪತ್ರೆಯ ಹಿರಿಯ ನೇತ್ರ ತಜ್ಞ ಡಾ.ಬಿ.ಜಿ. ಪ್ರದೀಪ್ ಮಾತನಾಡಿ, ರಕ್ತದಲ್ಲಿನ ಹೆಚ್ಚಿನ ಮಟ್ಟದ ಸಕ್ಕರೆ (ಗ್ಲೂಕೋಸ್)ಗೆ ಪದೇ ಪದೇ ಒಡ್ಡಿಕೊಳ್ಳುವುದರಿಂದ ರೆಟಿನಾ ಸೇರಿದಂತೆ ಸಣ್ಣ ರಕ್ತನಾಳಗಳ ಗೋಡೆಗಳು ದುರ್ಬಲವಾಗುತ್ತವೆ ಮತ್ತು ಆದ್ದರಿಂದ ಹಾನಿಗೆ ಹೆಚ್ಚು ಒಳಗಾಗುತ್ತವೆ. ಹಾನಿಗೊಳಗಾದ ರೆಟಿನಾದ ರಕ್ತನಾಳಗಳು ರಕ್ತ ಮತ್ತು ದ್ರವವನ್ನು ರೆಟಿನಾಕ್ಕೆ ಸೋರಿಕೆ ಮಾಡುತ್ತವೆ ಎಂದರು. ಶಿಬಿರದಲ್ಲಿ ಡಾ. ಪದ್ಮಪ್ರಿಯ, ಡಾ.ಡಿಂಪಲ್ ಹಾಗೂ ವಿಠಲ ಕಣ್ಣಿನ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಮತ್ತು ಹಿರಿಯ ನೇತ್ರಾಧಿಕಾರಿ ಕೆ.ಸಿ ರಾಮು, ಪುಷ್ಪಲತಾ, ಲಕ್ಷ್ಮಿ, ರವಿಕುಮಾರ್ ಮತ್ತು ರಮೇಶ್ ಇದ್ದರು. ಶಿಬಿರದಲ್ಲಿ ಒಟ್ಟು 19 ಜನ ಫಲಾನುಭವಿಗಳನ್ನು ತಪಾಸಣೆ ನಡೆಸಲಾಯಿತು. ಮೂರು ಜನರಿಗೆ ಲೇಜರ್ ಚಿಕಿತ್ಸೆ ನೀಡಲಾಯಿತು. ಮೂರು ಜನರಿಗೆ ಕಣ್ಣಿನ ಪೊರೆ ಚಿಕಿತ್ಸೆ ನೀಡಲಾಯಿತು.

### ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು ನೀಡುವ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ' ಎಂದು ನಮೂದಿಸಬೇಕು. ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ತರಬೇತಿಯ ಅವಧಿ ವೇಳೆ ಮಾಹೆಯಾನ 15,000/- ರೂ. ಗಳ ಸ್ಟೈಫೆಂಡ್ ನೀಡಲಾಗುವುದು. ತರಬೇತಿಯು 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ. ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ.ತರಬೇತಿಯಅವಧಿಯಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದುರುಗಿಸುವುದಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು. ಅರ್ಜಿಸಲ್ಲಿಸಲು ಡಿಸೆಂಬರ್ 04 ಕೊನೆಯ ದಿನವಾಗಿದ್ದು, ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು.

ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ತುಕಾರಾಂರಾವ್ ಬಿ.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಲ್ಬುರ್ಗಿ, ಮಂಗಳೂರು ಜಿಲ್ಲೆಗಳಿಗೆ ಸ್ಲೀಪರ್ ಪಲ್ಲಕ್ಕಿ ಸೌಕರ್ಯ

» ದಾವಣಗೆರೆ

ದಾವಣಗೆರೆ ಭಾಗದ ಪ್ರಯಾಣಿಕರ ಅನುಕೂಲಕ್ಕಾಗಿ ಕಲ್ಬುರ್ಗಿ ಮತ್ತು ಮಂಗಳೂರು ಜಿಲ್ಲೆಗಳಿಗೆ ಹವಾ ನಿಯಂತ್ರಿತ ರಹಿತ ಸ್ಲೀಪರ್ ಪಲ್ಲಕ್ಕಿ ಸಾರಿಗೆ ಸೌಕರ್ಯವನ್ನು ಕಲ್ಪಿಸಲಾಗಿದೆ.

# ಇಂದಿರಾ ಬಡವರಿಗೆ ಉತ್ತಮ ಕಾರ್ಯಕ್ರಮ

» ಚಿತ್ರದುರ್ಗ



ಇಂದಿರಾಗಾಂಧಿಯವರು ತಮ್ಮ ಅಧಿಕಾರದ ಅವಧಿಯಲ್ಲಿ ಬ್ಯಾಂಕ್ ಗಳನ್ನು ರಾಷ್ಟ್ರೀಕರಣ ಮಾಡುವುದರ ಮುಲಕ ಬಡವರು, ರೈತರು, ಕಾರ್ಮಿಕರು, ಸಾಮಾನ್ಯ ಜನತೆ ಬ್ಯಾಂಕ್‌ನ ವ್ಯವಹಾರದಲ್ಲಿ ಭಾಗವಹಿಸವಂತೆ ಮಾಡಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರ್ಲಗುಂಟೆ ರಾಮಪ್ಪ ತಿಳಿಸಿದರು.

ಚಿತ್ರದುರ್ಗ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಭಾನುವಾರ ಮಾಜಿ ಪ್ರಧಾನಮಂತ್ರಿ ಶ್ರೀಮತಿ ಇಂದಿರಾಗಾಂಧಿಯವರ 106ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಇಂದಿರಾಗಾಂಧಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಒಂದು ಕಾಲದಲ್ಲಿ ಬ್ಯಾಂಕ್ ಎಂದರೆ ಶ್ರೀಮಂತರಿಗಾಗಿಯೇ ಇತ್ತು ಅಲ್ಲಿ ಬಡವರು ರೈತರು ಕಾರ್ಮಿಕರು ಸೇರಿದಂತೆ ಇತರೆ ವರ್ಗದವರು ಹೋಗದ ರೀತಿಯಲ್ಲಿ ಪರಿಸ್ಥಿತಿ ನಿರ್ಮಾಣವಾಗಿತ್ತು. ಇಂತಹ ಸಮಯದಲ್ಲಿ ಇಂದಿರಾಗಾಂಧಿಯವರು 1959ರಲ್ಲಿ 14 ಮತ್ತು 1969ರಲ್ಲಿ 6 ಬ್ಯಾಂಕ್ ಗಳನ್ನು ರಾಷ್ಟ್ರೀಕರಣ ಮಾಡುವುದರ ಮೂಲಕ ಬಡವರು ಸೇರಿದಂತೆ ಎಲ್ಲಾ ವರ್ಗದವರು ಸಹಾ ಬ್ಯಾಂಕ್‌ನ ಉಪಯೋಗ ಪಡೆಯುವ ಸೌಲಭ್ಯವನ್ನು ಕಲ್ಪಿಸಿದರು ಎಂದರು.

ಇಂದಿರಾಗಾಂಧಿಯವರು ತಮ್ಮ ಆಡಳಿತದ ಅವಧಿಯಲ್ಲಿ ಹಲವಾರು ಜನಪರವಾದ ಕಾರ್ಯಕ್ರಮಗಳನ್ನು ಬಡವರಿಗಾಗಿ ನೀಡುವುದರ ಮೂಲಕ ಉತ್ತಮವಾದ ಆಡಳಿತವನ್ನು ನೀಡಿದರು. ತಮ್ಮ ಅಧಿಕಾರದ ಅವಧಿಯಲ್ಲಿ ಉತ್ತಮವಾದ ಸಚಿವ ಸಂಪುಟವನ್ನು ಹೊಂದಿದ್ದ ಅವರು, ಉತ್ತಮವಾದ ನಿರ್ಣಯಗಳನ್ನು ತೆಗೆದುಕೊಳ್ಳುವುದರ ಮೂಲಕ ಜನ ಸ್ನೇಹಿ ಆಡಳಿತವನ್ನು ನೀಡಿದರು. ಚುನಾವಣೆಯ ಸಮಯದಲ್ಲಿ ವಾಜಿಪೇಯಿಯವರ ವಿರುದ್ದ ಕಾಂಗ್ರೆಸ್ ಪಕ್ಷದಿಂದ ವೀಕ್ ಅಭ್ಯರ್ಥಿಯನ್ನು ಹಾಕುವುದರ ಮೂಲಕ ಅವರನ್ನು ಪಾರ್ಲಿಮೆಂಟ್‌ಗೆ ಆಯ್ಕೆ ಮಾಡಿ ಅಲ್ಲಿ ಸರ್ಕಾರದ ತಪ್ಪುಗಳನ್ನು ತಿಳಿಸುವಂತ ಕಾರ್ಯವನ್ನು ಮಾಡಿದರು. ಅಂದಿನ ದಿನಮಾನದಲ್ಲಿ ರಾಜಕೀಯ ಎಂದರೆ ಉತ್ತಮವಾದ ಬಾಂಧವ್ಯವನ್ನು ಹೊಂದಿತ್ತು ಎಂದರು.

ಇಂದಿನ ದಿನಮಾನದಲ್ಲಿ ರಾಜಕೀಯ ಎಂದರೆ ದ್ವೇಷದ ರಾಜಕಾರಣ ಎಂಬಂತೆ ಆಗಿದೆ, ಒಂದು ಪಕ್ಷದವರನ್ನು ಕಂಡರೆ ಮತ್ತೊಂದು ಪಕ್ಷದವರಿಗೆ ಆಗುವುದಿಲ್ಲ ಅವರು ಮಾಡಿದ ಸಣ್ಣ ತಪ್ಪನ್ನು ಸಹಾ ದೊಡ್ಡದಾಗಿ ಬಿಂಬಿಸುವುದರ ಮೂಲಕ ದ್ವೇಷವನ್ನು ಸಾಧಿಸಿ ಅವರ ತೇಜೋವಧೆಗೆ ಮುಂದಾಗುತ್ತಿದ್ದಾರೆ. ಇದರಿಂದ ಮತದಾರರ ದಿಕ್ಕನ್ನು ತಪ್ಪಿಸುವ ಕಾರ್ಯವನ್ನು ಮಾಡುತ್ತಿದ್ದಾರೆ. ಇವರು ಈ ರೀತಿ ಮಾಡುವುದರಿಂದ ನಮ್ಮ ಸರ್ಕಾರದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಇದನ್ನು ನಮ್ಮ ಪಕ್ಷದವರು ಸಹಾ ಪರಿಗಣನೆಗೆ ತೆಗೆದುಕೊಳ್ಳುವುದಿಲ್ಲ ಎಂದ ಅವರು ಸರ್ಕಾರ ಚುನಾವಣೆ ಸಮಯದಲ್ಲಿ ನೀಡಿದ ಮಾತಿನಂತೆ ಜನರಿಗೆ ಭಾಗ್ಯಗಳನ್ನು ಜಾರಿ ಮಾಡಿದೆ, ಇದನ್ನು ಪಕ್ಷದ ಕಾರ್ಯಕರ್ತರು ಸರಿಯಾದ ರೀತಿಯಲ್ಲಿ ಜನತೆಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ನಮಗೆ ಶ್ರೀರಕ್ಷೆಯಾಗಲಿದೆ ಎಂದು ರಾಮಪ್ಪ ತಿಳಿಸಿದರು.

ಕಾಂಗ್ರೆಸ್ ಸರ್ಕಾರ ನೀಡಿರುವ ಭಾಗ್ಯಗಳ ಬಗ್ಗೆ ದೇಶದಲ್ಲಿಯೇ ಚರ್ಚೆಯಾಗುತ್ತಿದೆ, ಮುಂದಿನ ಎಲ್ಲಾ ಚುನಾವಣೆಯಲ್ಲಿಯೂ ಸಹಾ ಇದನ್ನು ಅನುಸರಿಸುವ ಕಾರ್ಯವಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯರವರು ಪ್ರಜಾಪ್ರಭುತ್ವವನ್ನು ರಕ್ಷಣೆ ಮಾಡುವ ಕಾರ್ಯವನ್ನು ಮಾಡುತ್ತಿದ್ದಾರೆ. ಇದೇ ರೀತಿ ಸಂವಿಧಾನವನ್ನು ಫಾಲನೆ ಮಾಡುತ್ತಾ ಆಡಳಿತವನ್ನು ನಡೆಸುತ್ತಿದ್ದಾರೆ. ಬಿಜೆಪಿಯವರು ಸಂವಿಧಾನದಲ್ಲಿ ನಂಬಿಕೆ ಇಲ್ಲದೆ ಅದನ್ನು ತೆಗಳುವ ಮಾತುಗಳನ್ನಾಡುತ್ತಿದ್ದಾರೆ ಎಂದರು.

ಜಿಲ್ಲಾ ಮಹಿಳಾ ಕಾಂಗ್ರೆಸ್ ನ ಅಧ್ಯಕ್ಷರಾದ ಶ್ರೀಮತಿ ಗೀತಾನಂದಿನಿಗೌಡರವರು ಮಾತನಾಡಿ, ಇಂದಿರಾಗಾಂಧಿಯವರು ದೇಶದ ಎಲ್ಲಾ ಮಹಿಳೆಯರಿಗೆ ಆದರ್ಶವಾಗಿದ್ದಾರೆ. ಇಲ್ಲಿ ಪಕ್ಷದ ಮುಖಂಡರು ಹೇಳುವ ಮಾತುಗಳನ್ನು ಕೇಳಿಸಿಕೊಂಡು ಬೇರೆಯವರಿಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ. ಇಂದಿರಾಗಾಂಧಿಯವರ ಆಡಳಿತ ಉತ್ತಮವಾಗಿದ್ದು ಅಂದು ಆವರು ಹಾಕಿ ಕೊಟ್ಟ ವಿವಿಧ ಕಾರ್ಯಕ್ರಮಗಳು ಇಂದಿಗೂ ಸಹಾ ಧಾರಿ ದೀಪವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ಅಧ್ಯಕ್ಷರಾದ ತಾಜ್‌ಪೀರ್ ಮಾತನಾಡಿ, ಇಂದಿರಾಗಾಂಧಿಯಂತಹ ಮಾಹಾನ್ ನಾಯಕಿ ಇದ್ದ ಪಕ್ಷದಲ್ಲಿ ನಾವುಗಳು ಇರುವುದು ನಮ್ಮ ಸೌಭಾಗ್ಯವಾಗಿದೆ. ನಿಜಲಿಂಗಪ್ಪ ಮತ್ತು ಇಂದಿರಾಗಾಂಧಿಯವರ ಬಾಂಧವ್ಯ ಉತ್ತಮವಾಗಿತ್ತು ಅವರನ್ನು ಇಂದಿರಾಗಾಂಧಿಯವರು ಚಿಕ್ಕಪ್ಪ ಎಂದು ಕರೆಯುತ್ತಿದ್ದರು. ಅವರನ್ನು ನಾನು ಚಿಕ್ಕ ವಯಸ್ಸಿನಲ್ಲಿ ನೋಡಿದ್ದು ಅವರ ಭಾಷಣವನ್ನು ಸ್ವಲ್ಪ ದೂರದಿಂದ ಕೇಳುವ ಸೌಭಾಗ್ಯ ನನಗೆ ಸಿಕ್ಕಿತು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಕಾಂಗ್ರೆಸ್ ಹಿರಿಯವರಾದ ಜಮೀರ್, ಮೈಲಾರಪ್ಪ, ಸಂಪತ್ ಕುಮಾರ್. ಕೆಡಿಪಿ ಸದಸ್ಯರಾದ ನಾಗರಾಜ್ ಇಂದಿರಾಗಾಂಧಿಯವರ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ಓ ಶಂಕರ್, ಎನ್.ಡಿ.ಕುಮಾರ್, ರವಿ, ಮುದಸಿರ್, ಸಂದೀಪ್, ಭಾಗ್ಯಮ್ಮ, ತುಳಸಿ, ಮಹಾಂತೇಶ್, ಸುನಿಲ್‌ಕುಮಾರ್ ಶ್ರೀಮತಿ ಮೋಕ್ಷಾ ರುದ್ರಸ್ವಾಮಿ, ಶ್ರೀಮತಿವೀಣಾ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಎಸ್.ಜೆ.ಎಸ್ ಶಾಲೆಯಲ್ಲಿ ರಾಜ್ಯೋತ್ಸವ



» ಚಿತ್ರದುರ್ಗ

ಮಕ್ಕಳು ಒಳ್ಳೆಯ ಪ್ರಜೆಗಳಾಗಿ ಹೊರಹೊಮ್ಮಬೇಕು ಎಂದು ವಿರಕ್ತಮಠದ ಚನ್ನಬಸವಸ್ವಾಮೀಜಿ ಹೇಳಿದರು.

ನಗರದ ಹೊರ ವಲಯದಲ್ಲಿ ಎಸ್.ಜೆ.ಎಸ್ ಸಮೂಹ ಸಂಸ್ಥೆ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಕ್ಕಳು ಉತ್ತಮ ಸಂಸ್ಥೆಯನ್ನು ರೂಡಿಸಿಕೊಂಡು ಒಳ್ಳೆಯ ಪ್ರಜೆಗಳಾಗಿ ಬೆಳೆಯಬೇಕು. ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಯವರು ಶ್ರಮಪಟ್ಟು ಕಟ್ಟಿರುವ ಶಾಲೆಗೆ ಹೆಸರು ತರುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ರಾಕೇಶ್ ಮಾತನಾಡಿ, ಮಕ್ಕಳು ಮುಂದಿನ ಪ್ರಜೆಗಳು ನೆಹರೂರವರ ಜನ್ಮದಿನದಂದು ಸಾಂಕೇತಿಕವಾದ ಮಕ್ಕಳ ಆಚರಿಸುತ್ತೇವೆ ಎನ್ನುವುದರ ಬಗ್ಗೆ ಹೇಳಿದರು.

ಚೈತ್ರ ಮಾತನಾಡಿ, ಇವತ್ತಿಗೆ ಕರ್ನಾಟಕ ಎಂಬ ನಾಮಕರಣ ಮಾಡಿ 50 ವರ್ಷಗಳ ಸಂಭ್ರಮ, ಭಾಷಾವಾರು ಪ್ರಾಂತ್ಯಗಳಾಗಿ ಬೇರ್ಪಡಿಸಿದಾಗ ಕನ್ನಡ ಮಾತನಾಡುವ ಪ್ರದೇಶಕ್ಕೆ ಕರ್ನಾಟಕ ಎಂಬ ನಾಮಕರಣ ಮಾಡಲಾಗಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಉಪಸ್ಥಿತರಿದ್ದರು. ಬೋಧಕ ಮತ್ತು ಬೋಧಕೇತರ ವರ್ಗ ಭಾಗವಹಿಸಿತ್ತು.

## ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು: ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ




» ಚಿತ್ರದುರ್ಗ

ಚಿತ್ರದುರ್ಗ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಈಚೆಗೆ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆ ನಡೆಸಲಾಯಿತು.

ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಹೆಚ್.ಬಿ. ನರಸಿಂಹಮೂರ್ತಿ ಕಾರ್ಯಕ್ರಮ ಉದ್ಘಾಟಿಸಿ, ಯುವ ಸಂಸತ್ ಕಾರ್ಯಕ್ರಮದ ಮಹ್ವತವನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.

ಡಾ.ಜೆ.ಮೋಹನ್ ಪ್ರಾಸ್ತವಿ ಕವಾಗಿ ಮಾತನಾಡಿ, ಯುವ ಸಂಸತ್ ಮಹತ್ವ ಹಾಗೂ ಭಾರತದ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಲು ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆ ಅತಿ ಮಹತ್ವದ್ದು ಎಂದು ಹೇಳಿದರು.

ಜಿಲ್ಲಾಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಶ್ರೀರಾಂಪುರದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ಟಿ.ವೈ.ರೂಪ ಪ್ರಥಮ ಬಹುಮಾನ, ಚಿಕ್ಕಗೊಂಡನಹಳ್ಳಿಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ಕೆ.ಅಶ್ವಿನಿ ದ್ವಿತೀಯ ಬಹುಮಾನ ಪಡೆದುಕೊಂಡರು.

ಸಭೆಯಲ್ಲಿ ಪ್ರಾಂಶುಪಾಲ ವಿ.ಲೋಕೇಶ್, ಎಂ.ರಮೇಶ್, ಎಂ. ವಿಜಯೇಂದ್ರ, ಚಂದ್ರಶೇಖರ್, ಬುಡೇನ್ ಸಾಬ್ ಸೇರಿದಂತೆ ಕಾಲೇಜಿನ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

## ಬೆಳೆ ಪರಿಹಾರ ವಿಳಂಬ: ಸಕಾರದ ವಿರುದ್ಧ ಪ್ರತಿಭಟನೆ



ಚಿತ್ರದುರ್ಗ : 2023ನೇ ಸಾಲಿನ ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ಕಾರ ಬರಗಾಲ ಎಂದು ಘೋಷಣೆ ಮಾಡಿದ್ದು, ರೈತರಿಗೆ ಬೆಳೆನಷ್ಟ ಪರಿಹಾರ ಮತ್ತು ಬೆಳೆವಿಮೆ ಪರಿಹಾರವನ್ನು ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡುವಲ್ಲಿ ವಿಳಂಬ ಮಾಡುತ್ತಿದ್ದು, ಕೂಡಲೇ ಅನುದಾನವನ್ನು ರೈತರ ಬ್ಯಾಂಕ್ ಖಾತೆಗೆ ಜಮಾ ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆಯನ್ನು ನಡೆಸಿ ಆಗ್ರಹಿಸಿದರು.

ಚಿತ್ರದುರ್ಗ ಜಿಲ್ಲೆಯು ಸುಮಾರು ವರ್ಷಗಳಿಂದ ಬರಗಾಲಕ್ಕೆ ತುತ್ತಾಗಿರುವ ಜಿಲ್ಲೆ ಹಾಗೂ ಬಯಲುಸಿಮಯ ಜಿಲ್ಲೆ, ಅತಿ ಕಡಿಮೆ ಮಳೆ ಬೀಳುವ ಪ್ರದೇಶವಾಗಿದ್ದು 2023ನೇ ಸಾಲಿನಲ್ಲಿ ಬರಗಾಲ ಎಂದು ಸರ್ಕಾರ ಎಂದು ಘೋಷಣೆ ಮಾಡಿದ್ದರೂ ಸಹ ಇಲ್ಲಿಯವರೆಗೂ ಯಾವುದೇ ಬರಪರಿಹಾರದ ಕಾಮಗಾರಿಯನ್ನು ಕೈಗೊಳ್ಳದೆ ಹಾಗೂ ರೈತರ ಬ್ಯಾಂಕ್ ಖಾತೆಗೆ ಬೆಳೆವಿಮೆ, ಬೆಳೆನಷ್ಟ ಪರಿಹಾರವನ್ನು ಇಲ್ಲಿಯವರೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಿಡುಗಡೆ ಮಾಡದೆ ವಿಳಂಬ ಮಾಡಿ ಮಲತಾಯಿ ಧೋರಣೆಯನ್ನು ಅನುಸರಿಸುತ್ತಿರುತ್ತವೆ. ಹಾಗೂ ಸರ್ಕಾರ ರೈತರ ಪಂಪ್‌ಸೆಟ್‌ಗಳಿಗೆ ರೈತರೇ ಟ್ರಾನ್ಸ್‌ಫಾರಂ ಕಂಬ, ವೈರ್‌ಗಳನ್ನು ಸ್ವಂತ ಖರ್ಚಿನಲ್ಲಿ ಧರಿಸಬೇಕೆಂದು ಸರ್ಕಾರ ಆದೇಶ ಮಾಡಿರುತ್ತದೆ.

## ಪ್ರಮುಖ ಸುದ್ದಿ

# ಟಿಪ್ಪು ಸೇವಾ ಕಾರ್ಯ ಎಲ್ಲರಿಗೂ ಮಾದರಿ: ರಘುಮೂರ್ತಿ

» ಚಳ್ಳಕೆರೆ



ದೇಶದ ಕಂಡ ಕೆಲವೇ ಕೆಲವು ಮಹಾನ್ ನಾಯಕರಲ್ಲಿ ಟಿಪ್ಪುಸುಲ್ತಾನ್ ಸಹ ಒಬ್ಬರಾಗಿದ್ದಾರೆ. ಅನೇಕ ಉತ್ತಮ ಕಾರ್ಯಗಳ ಮೂಲಕ ಜನರಿಗೆ ಆಸರೆಯಾಗಿದ್ದರು. ಬ್ರಿಟೀಷರನ್ನು ವಿರುದ್ದ ಹೋರಾಟ ನಡೆಸಿದ ಮಹರಾಜರುಗಳಲ್ಲಿ ಟಿಪ್ಪುಸಹ ಇಬ್ಬರು. ಟಿಪ್ಪುಸುಲ್ತಾನ್‌ಗಳ ಆದರ್ಶಗಳು ಎಲ್ಲರಿಗೂ ಮಾದರಿ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.ಅವರು, ಸರ್ಕಾರಿ ನೌಕರರ ಭವನದಲ್ಲಿ 273ನೇ ಟಿಪ್ಪುಸುಲ್ತಾನ್ ಜಯಂತಿ ಹಾಗೂ 68ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ಮತ್ತು ಮುಸ್ಲಿಂ ಸಮುದಾಯದ ಈ ಕಾರ್ಯಕ್ರಮ ನಡೆಸಿದರು.ಹಜರತ್ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂವಲಿ ಮಾತನಾಡಿ, ಹಳೇಯ ಮೈಸೂರು ಸಂಸ್ಥಾನದಲ್ಲಿ ಟಿಪ್ಪುಸುಲ್ತಾನ್ ಮಾಡಿದ ಸುಧಾರಣೆಗಳು ಇಂದಿಗೂ ಮಾದರಿಯಾಗಿವೆ. ಕೇವಲ ಮೈಸೂರು ರಾಜ್ಯವಷ್ಟೇಯಲ್ಲ, ಕರ್ನಾಟಕ ಇನ್ನಿತರ ಪ್ರದೇಶಗಳಲ್ಲೂ ಸಹ ಟಿಪ್ಪುಸುಲ್ತಾನ್ ಸುಂದರವಾದ ಕಟ್ಟಡ ನಿರ್ಮಿಸಿದ್ದಾರೆ. ದಲಿತರಿಗೆ ಭೂಮಿ, ಮದ್ಯಪಾನ ನಿಷೇದ ಮುಂತಾದಕ್ರಾಂತಿಕಾರಿಬದಲಾವಣೆಗಳನ್ನು ತಂದವರಲ್ಲಿ ಟಿಪ್ಪುಸುಲ್ತಾನ್ ಮೊದಲಿಗರು ಎಂದರು.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಕನ್ನಡ ರಾಜ್ಯೋತ್ಸವ ರಾಜ್ಯಪ್ರಶಸ್ತಿ ವಿಜೇತ ಪಿ.ತಿಪ್ಪೇಸ್ವಾಮಿಯವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಸಮಾಜ ಸೇವಕ ಎಚ್. ಎಸ್.ಸೈಯದ್, ನಗರಸಭಾ ಸದಸ್ಯ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಜಾಕೀರ್‌ಹುಸೇನ್, ಷಂಷಾದ್‌ಭಾನು, ಸೋಮಗುದ್ದುರಂಗಸ್ವಾಮಿ, ಅನ್ವರ್ ಮಾಸ್ಟರ್, ಕೆಜಿಎನ್ ಮುಜೀಬುಲ್ಲಾ, ಅತಿಕೂರ್ ರೆಹಮಾನ್, ಎಂ.ದಾದಾಪೀರ್, ಸಿ.ವೈ.ಶಿವರುದ್ರಪ್ಪ ಮುಂತಾದವರು ಪಾಲ್ಗೊಂಡಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ವೇದಿಕೆ ಅಧ್ಯಕ್ಷ ಪಿ.ಬಷೀರ್ ಹಯಾತ್ ವಹಿಸಿದ್ದರು.

**ಫಾಸ್ಟ್ ನ್ಯೂಸ್**

## ಮಕ್ಕಳ ದಿನಾಚರಣೆ ಅಂಗವಾಗಿ ವಿವಿಧ ಸ್ಪರ್ಧೆ: ಅರ್ಜಿ ಆಹ್ವಾನ

» ಚಿತ್ರದುರ್ಗ

ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಸಮಿತಿ ವತಿಯಿಂದ 9 ರಿಂದ 16 ವರ್ಷದ ಮಕ್ಕಳಿಗಾಗಿ ಬೆಂಗಳೂರಿನ ರಾಜ್ಯ ಬಾಲಭವನ ಸೊಸೈಟಿಯಲ್ಲಿ ನವೆಂಬರ್ 21 ರಿಂದ 23 ರವರೆಗೆ ನಡೆಯುವ ಮಕ್ಕಳ ದಿನಾಚರಣೆ ಅಂಗವಾಗಿ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ಜಿಲ್ಲಾಮಟ್ಟದಲ್ಲಿ ಇದೇ ನವೆಂಬರ್ 20ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಸೃಜನಾತ್ಮಕ ಪ್ರದರ್ಶನ ಕಲೆಗಳಾದ ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟ ಕ ಶಾಸ್ತ್ರೀಯ ಸಂಗೀತ, ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ ಸ್ಪರ್ಧೆ, ವಾದ್ಯ ಸಂಗೀತಗಳಾದ ತಬಲಾ, ಮೃದಂಗ, ಕೀಬೋರ್ಡ್, ಕೊಳಲು, ಡೊಳ್ಳು ಮತ್ತು ನಗಾರಿ, ವಿಜ್ಞಾನದಲ್ಲಿ ಸೃಜನಾತ್ಮಕ ಅವಿಷ್ಕಾರ, ಚಿತ್ರಕಲೆ ಸ್ಪರ್ಧೆ, ಅಂಗವಿಕಲ, ಬುಡಕಟ್ಟು ಪ್ರದೇಶದ ಮಕ್ಕಳಿಗಾಗಿ ಯಾವುದೇ ಪ್ರಕಾರದ ಸ್ಪರ್ಧೆಗಳಲ್ಲಿ ಭಾಗವಹಿಸಬಹುದು. ಜಿಲ್ಲಾಮಟ್ಟದಲ್ಲಿ ಆಯ್ಕೆಯಾದ ಮಕ್ಕಳಿಗೆ ಬಹುಮಾನವನ್ನು ನೀಡಿ ರಾಜ್ಯಮಟ್ಟದ ಸ್ಪರ್ಧೆಗಳಿಗೆ ಕಳುಹಿಸಲಾಗುವುದು. ಆಸಕ್ತ ಪೋಷಕರು ಮತ್ತು ಮಕ್ಕಳು ಅರ್ಜಿಯನ್ನು ಸಲ್ಲಿಸಲು ನವೆಂಬರ್ 20ರ ಬೆಳಿಗ್ಗೆ 9.30ರೊಳಗೆ ನೊಂದಾಯಿಸಿಕೊಳ್ಳಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಾರ್ಯದರ್ಶಿಗಳು, ಜಿಲ್ಲಾ ಬಾಲಭವನ ಸಮಿತಿ, ರಾಜೇಂದ್ರ ನಗರ, ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದ ಮುಂಭಾಗ, ಚಿತ್ರದುರ್ಗ ಇವರನ್ನು ಸಂಪರ್ಕಿಸಬಹುದು.

## ನ.23ರಂದು ವಿಶೇಷಚೇತನರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆ

» ಚಿತ್ರದುರ್ಗ

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಇದೇ ನವೆಂಬರ್ 23ರಂದು ಬೆಳಿಗ್ಗೆ 10 ಗಂಟೆಗೆ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ವಿಶೇಷಚೇತನರಿಗೆ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ. ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆಗಳ ವಿವರ: 18 ರಿಂದ 45 ವರ್ಷ ವಯೋಮಿತಿಯ ಅಂಧರಿಗೆ ಮಡಿಕೆ ಹೊಡೆಯುವುದು, ಕೇನ್ ರೇಸ್ ಸ್ಪರ್ಧೆ ನಡೆಯಲಿದೆ. ಶ್ರವಣ ದೋಷವುಳ್ಳವರಿಗೆ 100ಮೀ ಓಟ, ಗುಂಡು ಎಸೆತ, ಜಾವಲಿನ್ ಥ್ರೋ ಸ್ಪರ್ಧೆ ನಡೆಯಲಿದೆ. ದೈಹಿಕ ವಿಕಲಚೇತನರಿಗೆ 100 ಮೀ ಓಟ, ಗುಂಡು ಎಸೆತ, ಜಾವಲಿನ್ ಥ್ರೋ. ಬುದ್ಧಿಮಾಂದ್ಯರಿಗೆ 100ಮೀ ಓಟ, ಬಕೆಟ್‌ನಲ್ಲಿ ರಿಂಗ್ ಎಸೆತ, ಮ್ಯೂಜಿಕಲ್ ಚೇರ್ ಕ್ರೀಡೆಗಳನ್ನು ಆಯೋಜಿಸಲಾಗಿದೆ. ಸಾಂಸ್ಕೃತಿಕ ಸ್ಪರ್ಧೆಗಳ ವಿವರ: 18 ರಿಂದ 45 ವರ್ಷ ವಯೋಮಿತಿಯ ದೃಷ್ಟಿದೋಷ ಮತ್ತು ದೈಹಿಕ ವಿಕಲಚೇತನರು ಮತ್ತು ಬುದ್ಧಿಮಾಂದ್ಯವಿರುವವರಿಗೆ ಜಾನಪದ ಗೀತೆ, ಭಾವಗೀತೆ ಭಕ್ತಿಗೀತೆಯನ್ನು ಏರ್ಪಡಿಸಲಾಗಿದೆ. ಆಸಕ್ತ ವಿಶೇಷಚೇತನರು ಜಿಲ್ಲಾಮಟ್ಟದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾರರ ಪಟ್ಟಿ ಪರಿಷ್ಕರಣೆ ವೀಕ್ಷಕರಾದ ಡಾ.ಶಮ್ಲಾ ಇಕ್ಬಾಲ್‌ನ: ಚಿತ್ರದುರ್ಗಕ್ಕೆ

» ಚಿತ್ರದುರ್ಗ

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮದ ಕುರಿತು ಪರಿಶೀಲನೆ ನಡೆಸಲು ಚುನಾವಣಾ ಆಯೋಗದಿಂದ ಚಿತ್ರದುರ್ಗ ಜಿಲ್ಲೆಗೆ ಮತದಾರರ ಪಟ್ಟಿ ಪರಿಷ್ಕರಣೆ ವೀಕ್ಷಕರಾಗಿ ನಿಯುಕ್ತಿಗೊಂಡಿರುವ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್ ಅವರು ನ. 20 ರಂದು ಚಿತ್ರದುರ್ಗಕ್ಕೆ ಆಗಮಿಸಲಿದ್ದಾರೆ. ಈಗಾಗಲೆ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯಕ್ರಮ ಪ್ರಗತಿಯಲ್ಲಿದ್ದು, 18 ವರ್ಷ ತುಂಬಿರುವ ಯುವ ಜನರು ತಪ್ಪದೆ ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ನಮೂನೆ–06 ಭರ್ತಿ ಮಾಡಿ ಸಲ್ಲಿಸಲು ವ್ಯಾಪಕ ಜಾಗೃತಿ ಮೂಡಿಸಲಾಗುತ್ತಿದೆ. ಇದರ ಜೊತೆಗೆ ಹೆಸರು ತಿದ್ದುಪಡಿ, ಸ್ಥಳಾಂತರ ಮತ್ತಿತರ ಪರಿಷ್ಕರಣೆ ಕಾರ್ಯಕ್ಕೂ ಅವಕಾಶ ಕಲ್ಪಿಸಲಾಗಿದೆ. ಕಳೆದ ನ. 18 ಮತ್ತು 19 ರಂದು ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆಯ ವಿಶೇಷ ಅಭಿಯಾನ ಕೂಡ ಯಶಸ್ವಿಯಾಗಿ ಜರುಗಿದ್ದು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ಹಂತದ ಅಧಿಕಾರಿಗಳು ಕೂಡ ಸಕ್ರಿಯವಾಗಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಚುನಾವಣಾ ಆಯೋಗ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ಪರಿಶೀಲನೆಗಾಗಿ ಎಲ್ಲ ಜಿಲ್ಲೆಗಳಿಗೆ ಉನ್ನತ ಮಟ್ಟದ ಅಧಿಕಾರಿಗಳನ್ನು ಮತದಾರರ ಪಟ್ಟಿ ವೀಕ್ಷಕ ಅಧಿಕಾರಿಗಳನ್ನಾಗಿ ನಿಯೋಜಿಸಿದ್ದು, ಚಿತ್ರದುರ್ಗ ಜಿಲ್ಲೆಗೆ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಕಾರ್ಯದರ್ಶಿ ಡಾ. ಶಮ್ಲಾ ಇಕ್ಬಾಲ್ ಅವರನ್ನು ಮತದಾರರ ಪಟ್ಟಿ ಪರಿಷ್ಕರಣೆ ವೀಕ್ಷಕರನ್ನಾಗಿ ನೇಮಿಸಿದೆ.

### ಆರೋಗ್ಯ, ಶಿಕ್ಷಣ, ಕಾನೂನು ಕ್ಷೇತ್ರದ ಸಮಸ್ಯೆಗಳ ಕುರಿತು ಚರ್ಚೆ

# ಮೆಚ್ಚುಗೆಗೆ ಪಾತ್ರವಾದ ಅಣಕು ಯುವ ಸಂಸತ್

» ಚಿತ್ರದುರ್ಗ

ರಾಜ್ಯದ ಆರೋಗ್ಯ, ಶಿಕ್ಷಣ ಹಾಗೂ ಕಾನೂನು ಕ್ಷೇತ್ರದ ಜ್ವಲಂತ ಸಮಸ್ಯೆಗಳ ಕುರಿತ ಚರ್ಚೆಗೆ ಜಿ.ಪಂ. ಸಭಾಂಗಣದಲ್ಲಿ ಶನಿವಾರ ಜರುಗಿದ ಜಿಲ್ಲಾ ಮಟ್ಟದ ಯುವ ಸಂಸತ್ ಕಲಾಪ (ಅಣಕು ಪ್ರದರ್ಶನ) ವಿದ್ಯಾರ್ಥಿಗಳಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಪರಿಚಯಕ್ಕೆ ವೇದಿಕೆ ಕಲ್ಪಿಸಿದಂತೆ ಕಂಡುಬಂದಿತು.

ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಸಚಿವಾಲಯ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಂಯುಕ್ತಶ್ರಾಯದಲ್ಲಿ 2023–24ನೇ ಸಾಲಿನ ಜಿಲ್ಲಾ ಮಟ್ಟದ ಯುವ ಸಂಸತ್ ಸ್ಪರ್ಧೆಯಲ್ಲಿ ಜಿಲ್ಲೆಯ ಆರು ತಾಲ್ಲೂಕುಗಳ ಸರ್ಕಾರಿ ಪ್ರೌಢ ಶಾಲೆಯಿಂದ ಆಯ್ಕೆಯಾದ 20 ಮಕ್ಕಳು ಭಾಗವಹಿಸಿದ್ದರು.




ಜಿ.ಪಂ ಸಭಾಂಗಣದಲ್ಲಿ ಜರುಗಿದ ಅಣಕು ಯುವ ಸಂಸತ್ ಕಲಾಪ ನಿಜಕ್ಕೂ ಕುತೂಹಲಕಾರಿಯಾಗಿತ್ತು. ವಿಧಾನಸೌಧದಲ್ಲಿ ಜರುಗುವ ಕಲಾಪದ ರೀತಿಯಲ್ಲಿಯೇ, ಯುವ ಸಂಸತ್ ಕಲಾಪ ವಿದ್ಯಾರ್ಥಿಗಳ ಪ್ರತಿಭೆ ಪ್ರದರ್ಶನಕ್ಕೆ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವುದು ಮತ್ತು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳಲು ಪ್ರೇರೇಪಿಸುವ ರೀತಿಯ ಪರಿಕಲ್ಪನೆ ನಿಜಕ್ಕೂ ಪ್ರಶಂಸನೀಯವಾಯಿತು.

ಹೊಸದುರ್ಗ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ ಯಶವಂತ್ ಪಾಟೀಲ್ ಸಭಾಧ್ಯಕ್ಷ ಸ್ಥಾನದಲ್ಲಿ ಕುಳಿತು ಯುವ ಸಂಸತ್ ಕಾರ್ಯ ಕಲಾಪಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿದರು.

ಅಗಲಿದಗಣ್ಯರಿಗೆಸಂತಾಪ:ಡಾ.ಪುನೀತ್ ರಾಜ್‌ಕುಮಾರ್, ಡಾ.ಭುಜಂಗ ಶೆಟ್ಟಿ, ಡಿ.ಬಿ.ಚಂದ್ರೇಗೌಡರ ಅಕಾಲಿಕ ಮರಣದ ಕುರಿತು ಸಭಾಧ್ಯಕ್ಷರು ಸಂತಾಪ ಸೂಚನಾ ನಿರ್ಣಯ ಮಂಡಿಸಿದರು. ಅಗಲಿದ ಗಣ್ಯರ ಗೌರವಾರ್ಥವಾಗಿ ಒಂದು ನಿಮಿಷ ಮೌನ ಆಚರಿಸಲಾಯಿತು.

ಮುಖ್ಯಮಂತ್ರಿ ಹಾಗೂ ವಿರೋಧ ಪಕ್ಷದ ನಾಯಕರ ನಡುವೆ ಮಾತಿನ ಚಕಮಕಿ: ಹಿರಿಯೂರು ತಾಲ್ಲೂಕಿನ ಕೆ.ಪಿ.ಎಸ್. ಶಾಲೆ ವಿದ್ಯಾರ್ಥಿನಿ ವಿರೋಧ ಪಕ್ಷದ ನಾಯಕಿ ನಂದಿತಾ ಶಿಕ್ಷಣದ ಗುಣಮಟ್ಟ ಕಡಿಮೆಯಾಗಿದೆ. ಇದಕ್ಕೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಹೊಳಲ್ಕೆರೆ ತಾಲ್ಲೂಕಿನ ಎಂ.ಎಂ ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿ ಶಿಕ್ಷಣ ಸಚಿವೆ ಜಿ.ಆರ್.ಶಾಲಿನಿ ಎಲ್ಲಾ ಸರ್ಕಾರಿ ಶಾಲೆಗಳಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದ್ದು, ಶಿಕ್ಷಣ ಕ್ಷೇತ್ರದ ಹಲವು ಕೊರತೆಗಳನ್ನು ನೀಗಿಸುತ್ತಿದ್ದೇವೆ. ಎಲ್ಲಾ ಮಕ್ಕಳಿಗೂ ಸರ್ಕಾರದ ಸೌಲಭ್ಯಗಳನ್ನು ತಲುಪಿಸುತ್ತಿದ್ದೇವೆ ಎಂದರು. ಶಿಕ್ಷಣ ಮಂತ್ರಿಗಳ ಉತ್ತರದಿಂದ ಸಮಾಧಾನಗೊಳ್ಳದ ವಿರೋಧ ಪಕ್ಷದ ನಾಯಕರು ಹಾಗೂ ಶಾಸಕರು, ಉಡಾಫೆ ಉತ್ತರ ನೀಡಬಾರದು.

ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಕೋರಿದರು. ನಂತರ ಇದಕ್ಕೆ ಪ್ರತಿಕ್ರಿಯಿಸಿದ ಹೊಳಲ್ಕೆರೆ ಎಂ.ಎಂ. ಸರ್ಕಾರಿ ಪ್ರೌಢಶಾಲೆ ವಿದ್ಯಾರ್ಥಿನಿ ಮುಖ್ಯಮಂತ್ರಿ ಅಂಕಿತ, ಎಲ್ಲಾ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣ ನೀಡುವುದರ ಜೊತೆಗೆ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಕಂಪ್ಯೂಟರ್ ವ್ಯವಸ್ಥೆ, ಕ್ರೀಡಾ ಸಾಮಾಗ್ರಿಗಳು, ಪಠ್ಯಪುಸ್ತಕಗಳನ್ನು ನೀಡುತ್ತಿದ್ದೇವೆ ಎಂದು ಉತ್ತರಿಸಿದ ಅವರು, ನಮ್ಮ ಸರ್ಕಾರ ಗಂಭೀರವಾಗಿದೆ. ನಿಮ್ಮ ಸರ್ಕಾರದಲ್ಲಿ ನೀಡುತ್ತಿದ್ದ ಶಿಕ್ಷಣದ ಗುಣಮಟ್ಟವನ್ನು ನಮ್ಮ ಸರ್ಕಾರ ಹೆಚ್ಚು ಮಾಡಿದೆ. ಉಡಾಫೆಯ ಪ್ರಶ್ನೆಯಿಲ್ಲ. ನಿಮ್ಮ ಸರ್ಕಾರದ ಆಡಳಿತ ವೈಖರಿ ನಮಗೆ ಗೊತ್ತಿದೆ ಎಂದು ಖಾರವಾಗಿ ವಿರೋಧ ಪಕ್ಷದ ವಿರುದ್ಧ ಹರಿಹಾಯ್ದರು.

ಮುಖ್ಯಮಂತ್ರಿಗಳ ಮಾತಿನಿಂದ ಕೆರಳಿದ ವಿರೋಧ ಪಕ್ಷದ ನಾಯಕಿ ಹಿರಿಯೂರು ತಾಲ್ಲೂಕಿನ ಕೆ.ಪಿ.ಎಸ್. ಶಾಲೆ ವಿದ್ಯಾರ್ಥಿನಿ ನಂದಿತಾ ಮುಖ್ಯಮಂತ್ರಿಗಳಿಗೆ ರಾಜ್ಯದ ಪ್ರತಿಯೊಂದು ಮಾಹಿತಿ ತಿಳಿದಿರಬೇಕು. ವಿರೋಧ ಪಕ್ಷದ ಸದಸ್ಯರು ಮಾಹಿತಿ ನೀಡಿದ ನಂತರ ಪರಿಶೀಲಿಸುತ್ತೇನೆ ಎನ್ನುವುದಲ್ಲ. ಮುಖ್ಯಮಂತ್ರಿಗಳಿಗೆ ಬೇರೆ ಏನು ಕೆಲಸವಿದೆ? ಹಿಂದಿನ ಆಳ್ವಿಕೆ ಬಗ್ಗೆ ಟೀಕಿಸುವ ಅಗತ್ಯವಿಲ್ಲ. ಹಿಂದಿನ ಸರ್ಕಾರದೊಂದಿಗೆ ಹೋಲಿಸಿ ಮಾತನಾಡಬೇಡಿ. ಪ್ರಸ್ತುತ ಯಾರ ಸರ್ಕಾರ ಆಡಳಿತದಲ್ಲಿದೆ ಎನ್ನುವುದು ಗಮನದಲ್ಲಿ ಇರಲಿ ಎಂದು ಮುಖ್ಯಮಂತ್ರಿಗಳನ್ನು ಕೆಣಕಿದರು.ವಿರೋಧ ಪಕ್ಷದ ನಾಯಕರ ಮಾತಿಗೆ ಏರುಧ್ವನಿಯಲ್ಲಿ ಉತ್ತರಿಸಲು ಪ್ರಯತ್ನಿಸಿದ ಮುಖ್ಯಮಂತ್ರಿಯನ್ನು ಸಭಾಧ್ಯಕ್ಷ ಯಶವಂತ್ ಪಾಟೀಲ್ ನಿಯಂತ್ರಿಸಿ, ಸದಸ್ಯರು ಕೇಳಿದ ಪ್ರಶ್ನೆಗೆ ಮಾತ್ರ ಉತ್ತರ ನೀಡಬೇಕು. ಅನಗತ್ಯವಾದ ವಿವಾದಗಳು ಬೇಡ ಎಂದು ತಾಕೀತು ಮಾಡುವ ಮೂಲಕ ಎಲ್ಲರ ಗಮನ ಸೆಳೆದರು.ನಮ್ಮ ಸರ್ಕಾರದ 5 ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸಲಾಗಿದೆ. ಮಹಿಳೆಯರಿಂದ ಶಕ್ತಿ ಯೋಜನೆಗೆ ಉತ್ತಮ ಪ್ರತಿಕ್ರಿಯೆ ಬಂದಿದೆ. ಗೃಹ ಲಕ್ಷ್ಮೀ ಯೋಜನೆಗಳ ಪಾವತಿಯನ್ನು ನೇರವಾಗಿ ಫಲಾನುಭವಿಗಳ ಖಾತೆ ಜಮೆ ಮಾಡಲಾಗುತ್ತಿದೆ. ತೊಂದರೆ ಕಂಡು ಬಂದರೆ ಅಧಿಕಾರಿಗಳಿಗೆ ಸರಿಪಡಿಸುವಂತೆ ಸೂಚನೆ ನೀಡಲಾಗಿದೆ. ಯುವನಿಧಿ ಯೋಜನೆಯನ್ನು ಶೀಘ್ರದಲ್ಲಿ ಜಾರಿಗೆ ತರಲಾಗುವುದುಎಂದುಮುಖ್ಯಮಂತ್ರಿಗಳು ಸದನಕ್ಕೆ ಉತ್ತರಿಸಿದರು.

ಯುವ ಸಂಸತ್ತು ಸ್ಪರ್ಧೆಯಲ್ಲಿ ಹೆಚ್.ಕೆ.ಅಕ್ಷತಾ,ವಿ.ನಂದಿತಾ,ಬಿ.ಎಂ.ಸಿದ್ಧಾರ್ಥ್, ಎ.ಆರ್.ಅಮಿತ್, ಎಸ್.ನಂದನಾ, ಮನೋಹರ, ಕುಶಲ್ , ರೋಹಿತ್, ರೋಹಿತ್ ಕುಮಾರ್ ಸೇರಿದಂತೆ ಇತರೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ರಾಜ್ಯಮಟ್ಟಕ್ಕೆ ಆಯ್ಕೆ: ಇದೇ ನವೆಂಬರ್ 25ರಂದು ಹಾವೇರಿಯಲ್ಲಿ ರಾಜ್ಯಮಟ್ಟದ ಯುವ ಸಂಸತ್ ಸ್ಪರ್ಧೆ ನಡೆಯಲಿದ್ದು, ಜಿಲ್ಲೆಯಿಂದ ಆಯ್ಕೆಯಾದ ಮೂವರು ವಿದ್ಯಾರ್ಥಿಗಳಾದ ಹಿರಿಯೂರು ತಾಲ್ಲೂಕಿನ ಹರಿಯಬ್ಬೆ ಕೆಪಿಎಸ್ ಶಾಲೆಯ ಎಸ್.ವಿ.ನಂದಿತ, ಹೊಳಲ್ಕೆರೆ ಪಟ್ಟಣದ ಎಂ.ಎಂ.ಪ್ರೌಢಶಾಲೆಯ ಎಸ್. ಅಂಕಿತ, ಮೊಳಕಾಲ್ಮುರು ತಾಲ್ಲೂಕಿನ ಆದರ್ಶ ವಿದ್ಯಾಲಯದ ಟಿ.ಮನೋಹರ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮಕ್ಕೂ ಮೊದಲು ಮಾತನಾಡಿದಶಾಲಾಶಿಕ್ಷಣಮತ್ತುಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಜಿಲ್ಲೆಯ ಸರ್ಕಾರಿ ಪ್ರೌಢಶಾಲೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಯುವ ಸಂಸತ್ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವ ಮೌಲ್ಯಗಳ ಜಾಗೃತಿ ಮೂಡಿಸುವುದು ಅತ್ಯಗತ್ಯವಾಗಿದೆ. ವಿಧಾನಸೌಧದಲ್ಲಿ ವಿಧಾನಮಂಡಲ ಅಧಿವೇಶನ, ಶಾಸನಗಳ ರಚನೆ ಬಗ್ಗೆ ಅರಿವು ಮೂಡಿಸುವ ದೃಷ್ಠಿಯಿಂದ ಶಾಲಾ ಹಂತದಲ್ಲಿಯೇ ಸಂಸದೀಯ ಚಟುವಟಿಕೆಗಳ ಬಗ್ಗೆ ತಿಳುವಳಿಕೆ ಮೂಡಿಸಲಾಗುತ್ತಿದೆ ಎಂದರು.

ದೇಶದ ಭವಿಷ್ಯ ರೂಪಿಸುವುದೇ ಶಾಲೆಯ ಮಕ್ಕಳು. ಗ್ರಾಮೀಣ ಪ್ರದೇಶದ ಮಕ್ಕಳ ಪ್ರತಿಭೆಯು ಹೆಚ್ಚಾಗಿ ಬೆಳೆಯಬೇಕು ಹಾಗೂ ರಾಷ್ಟ್ರೀಯ ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಬೇಕು ಎಂದು ಆಶಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ಆಂಗ್ಲ ಮತ್ತು ಸಮಾಜ ವಿಷಯದ ವಿಷಯ ಪರಿವೀಕ್ಷಕ ಚಂದ್ರಣ್ಣ, ಸಮಾಜ ವಿಜ್ಞಾನ ಸಂಘದ ಅಧ್ಯಕ್ಷ ಎ.ನೀಲಕಂಠಪ್ಪ, ಡಯಟ್ ಉಪನ್ಯಾಸಕ ಜ್ಞಾನೇಶ್, ತೀರ್ಪುಗಾರರಾದ ಬುಡೇನ್‌ಸಾಬ್, ಜೈಶ್ರೀನಿವಾಸ್, ಬಸವರಾಜ್ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

# ಲೋಕಾ ಚುನಾವಣೆಗೆ ಕಾಂಗ್ರೆಸ್ ಬೆಂಬಲಿಸಿ

» ಚಿತ್ರದುರ್ಗ

ಮೊಳಕಾಲ್ಮೂರಿನಲ್ಲಿ ವಕೀಲರ ಸಂಘದ ವತಿಯಿಂದ ಆಯೋಜಿಸಿದ್ದ ಸಭೆಯಲ್ಲಿ ವಕೀಲರಾದ ಡಾ.ಬಿ.ತಿಪ್ಪೇಸ್ವಾಮಿ (ಜೆ.ಜೆ.ಹಟ್ಟಿ) ರವರಿಗೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲಾ ವಕೀಲರು ಬೆಂಬಲ ವ್ಯಕ್ತಪಡಿಸಿದರು.



ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷರಾದ ಆನಂದಪ್ಪನವರು ಮಾತನಾಡಿ ವಕೀಲರಾದ ಡಾ.ಬಿ.ತಿಪ್ಪೇಸ್ವಾಮಿಯವರು ತಮ್ಮ ರಾಜಕೀಯ ಜೀವನದಲ್ಲಿ ಅನೇಕ ಹುದ್ದೆಗಳನ್ನು ಸಮರ್ಥವಾಗಿ ನಿಭಾಯಿಸಿದ್ದಾರೆ , ಮುಂಬರುವ ಲೋಕಸಭಾ ಚುನಾವಣೆಗೆ ಬೆಂಬಲ ಕೋರಿದ್ದು ಅವರೂ ಸಹ ವಕೀಲರಾಗಿರುವುದರಿಂದ ಅವರ ಕುಟುಂಬವಾದ ವಕೀಲರ ಸಂಘದ ಬೆಂಬಲ ನಿರೀಕ್ಷಿಸಿ ಬಂದಿದ್ದಾರೆ ಅವರಿಗೆ ಚುನಾವಣೆಯಲ್ಲಿ ಸಂಪೂರ್ಣ ಸಹಕಾರ ನೀಡುವುದಾಗಿ ಘೋಷಿಸಿದರು.

ವಕೀಲರ ಸಂಘದ ಉಪಾಧ್ಯಕ್ಷರಾದ ಶ್ರೀ ಮಂಜುನಾಥ್, ರವರು ಮಾತನಾಡಿ ವಕೀಲರ ವೃತ್ತಿ ಜೊತೆ ಜೊತೆಗೆ ಕಾಂಗ್ರೆಸ್ ಪಕ್ಷದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಡಾ.ಬಿ.ತಿಪ್ಪೇಸ್ವಾಮಿಯವರು ಸ್ಥಳೀಯ ಸಮಸ್ಯೆಗಳನ್ನು ಅರಿತಿದ್ದು ಈ ಜಿಲ್ಲೆಯ ಅಭಿವೃದ್ಧಿಯ ಬಗ್ಗೆ ಅವರದೇ ಆದ ಕನಸನ್ನು ಹೊಂದಿದ್ದಾರೆ.

ಹೊರಗಿನಿಂದ ಬಂದ ಸಂಸದರು ಈ ಜಿಲ್ಲೆಯ ಅಭಿವೃದ್ಧಿಯನ್ನು ಕಡೆಗಣಿಸಿದ್ದು , ಸ್ಥಳೀಯ ಸಮಸ್ಯೆಗಳಿಗೆ ಸ್ಥಳೀಯರಿಂದಲೇ ಮುಕ್ತಿ ಎಂಬಂತೆ ಚಿತ್ರದುರ್ಗ ಜಿಲ್ಲೆಯಲ್ಲಿ "ಸ್ಥಳೀಯ" ಕೂಗು ಕೇಳಿ ಬರುತ್ತಿರುವುದರಿಂದ ಸ್ಥಳೀಯ ನಾಯಕ ಡಾ.ಬಿ.ತಿಪ್ಪೇಸ್ವಾಮಿಯವರನ್ನ ಬೆಂಬಲಿಸೋಣ ಎಂದರು.

ವಕೀಲರ ಸಂಘದ ಕಾರ್ಯದರ್ಶಿ ಕುಮಾರಪ್ಪ ಮಾತನಾಡಿ ಹುಟ್ಟು ಹೋರಾಟಗಾರ ಡಾ.ಬಿ.ತಿಪ್ಪೇಸ್ವಾಮಿಯವರು ಜಿಲ್ಲಾದ್ಯಂತ ಪರಿಚಿತರು,ಬಡವರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಅವರು ಜಿಲ್ಲೆಯ ಮನೆಮಗನಾಗಿ ಹೆಸರು ಗಳಿಸಿರುವ ಇವರಿಗೆ ಕಾಂಗ್ರೆಸ್ ಪಕ್ಷ ಗುರುತಿಸಿ ಟಿಕೇಟ್ ನೀಡುವ ಮೂಲಕ ಸ್ಥಳೀಯರಿಗೆ ಸಾಮಾಜಿಕ ನ್ಯಾಯ ನೀಡಬೇಕು ಎಂದರು.

ಸಭೆಯಲ್ಲಿ ಅನೇಕ ಹಿರಿಯ ವಕೀಲರು, ಮಹಿಳಾ ವಕೀಲರು ಸಭೆಯಲ್ಲಿ ಹಾಜರಿದ್ದರು.

## ಇತ್ತಿಚಿನ ದಿನದಲ್ಲಿ ನ್ಯಾಯವಾದಿಗಳು ರಾಜಕೀಯಕ್ಕೆ ಬರುವ ಸಂಖ್ಯೆ ಕಡಿಮೆ




ಚಿತ್ರದುರ್ಗ: ಈ ಹಿಂದೆ ನ್ಯಾಯವಾದಿಗಳಾದವರು ಹೆಚ್ಚಿನ ಸಂಖ್ಯೆಯಲ್ಲಿ ರಾಜಕೀಯಕ್ಕೆ ಬರುತ್ತಿದ್ದರು, ಅವರು ಕಾನೂನು ತಿಳಿದುಕೊಂಡಿರುವುದರಿಂದ ಉತ್ತಮವಾದ ಆಡಳಿತವನ್ನು ನೀಡಲು ಸಹಕಾರಿಯಾಗುತ್ತಿತ್ತು ಆದರೆ ಇತ್ತಿಚಿನ ದಿನಮಾನದಲ್ಲಿ ನ್ಯಾಯವಾದಿಗಳು ರಾಜಕೀಯಕ್ಕೆ ಬರುವ ಸಂಖ್ಯೆ ಕಡಿಮೆಯಾಗುತ್ತಿದೆ ಎಂದು ಕಾಂಗ್ರೆಸ್ ಮುಖಂಡ, 2024ರ ಲೋಕಸಭೆ ಚುನಾವಣೆ ಟಿಕೇಟ್ ಆಕಾಂಕ್ಷಿ ಡಾ.ಬಿ. ತಿಪ್ಪೇಸ್ವಾಮಿ ಕಳವಳ ವ್ಯಕ್ತಪಡಿಸಿದ್ದಾರೆ. ಚಿತ್ರದುರ್ಗ ನಗರದ ವಕೀಲರ ಸಂಘದ ಆಶ್ರಯದಲ್ಲಿ ನಡೆದ ಶಾರದ ಪೂಜಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಹಿಂದೆ ಕಾನೂನನ್ನು ತಿಳಿದಿರುವ ನ್ಯಾಯವಾದಿಗಳು ರಾಜಕೀಯದಲ್ಲಿ ಆಸಕ್ತಿಯನ್ನು ಹೊಂದುವುದರ ಮೂಲಕ ರಾಜಕೀಯವನ್ನು ಪ್ರವೇಶ ಮಾಡುತ್ತಿದ್ದರು ಇದರಿಂದ ಅಧಿಕಾರಿಗಳಿಗೆ ಕಾನೂನಿನ ಬಗ್ಗೆ ತಿಳಿಸಿ ಜನತೆ ಸರಿಯಾದ ರೀತಿಯಲ್ಲಿ ಸಹಾಯವನ್ನು ಮಾಡುತ್ತಿದ್ದರು ಈಗಲೂ ಸಃಆ ರಾಜಕೀಯದಲ್ಲಿ ಹಲವಾರು ಜನ ನ್ಯಾಯವಾದಿಗಳು ಇದ್ದಾರೆ ಆದರೆ ಕಡಿಮೆ ಸಂಖ್ಯೆಯಲ್ಲಿದ್ದಾರೆ ಇದರ ಪ್ರಮಾಣ ಹೆಚ್ಚಾಗಬೇಕಿದೆ.

**ಪ್ರಮುಖ ಸುದ್ದಿ**


### ಸಹಕಾರಿ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗೆ ಪ್ರಧಾನಮಂತ್ರಿ ಮತ್ತು ಕೇಂದ್ರ ಗೃಹಸಚಿವ ದಿಟ್ಟ ನಿರ್ಧಾರಗಳೇ ಅಡಿಪಾಯ

# ನಂಬಿಕೆ ಪ್ರಾಮಾಣಿಕತೆಯಿಂದ ಈ ಕ್ಷೇತ್ರ ಉಳಿವು ಸಾಧ್ಯ: ನವೀನ್

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ಯಾವುದೇ ಆರ್ಥಿಕ ನೆರವು ಹಾಗೂ ಜನಬೆಂಬಲವಿಲ್ಲದೆ ಸೊರಗುತ್ತಿದ್ದ ಸಹಕಾರಿ ಕ್ಷೇತ್ರಕ್ಕೆ ಉತ್ತಮ ಮೆರಗುತಂದುಕೊಟ್ಟವರು ಪ್ರಧಾನಮಂತ್ರಿ ನರೇಂದ್ರಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾರವರು. ಸಹಕಾರಿ ಕ್ಷೇತ್ರವನ್ನು ಮತ್ತಷ್ಟು ಎತ್ತರ ಹೇರಿಸಲು ನಿರ್ಧರಿಸಿ ಸಹಕಾರಿ ಕ್ಷೇತ್ರಕ್ಕೆ ಪ್ರತ್ಯೇಕ ಸಚಿವಾಲ ಹಾಗೂ ಹಲವಾರು ಆರ್ಥಿಕ ಸೌಲಭ್ಯ ಅವರು ನೀಡಿದ್ದಾರೆ. ಇಂದು ಸಹಕಾರಿ ಕ್ಷೇತ್ರ ಉತ್ತಮ ಮಾರ್ಗದರ್ಶನಲ್ಲಿ ನಡೆದಿದೆ ಎಂದು ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ತಿಳಿಸಿದರು.

ನಗರದ ಬಸವೇಶ್ವರ ಕಲ್ಯಾಣಮಂಟಪದಲ್ಲಿ ಹಮ್ಮಿಕೊಂಡಿದ್ದ 70ನೇ ಅಖಿಲ ಭಾರತ ಸಹಕಾರಿ ಸಪ್ತಾಹ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಈ ಹಿಂದೆ ಸಹಕಾರಿ ಕ್ಷೇತ್ರದಲ್ಲಿ ಪರಸ್ಪರ ನಂಬಿಕೆ, ವಿಶ್ವಾಸದ ತಳಹದಿಯ ಮೇಲೆಯೇ ನಡೆಸಿಕೊಂಡು ಬರಲಾಗುತ್ತಿತ್ತು.



ಆದರೆ, ಬದಲಾದ ಕಾಲಪರಿಸ್ಥಿತಿಯಲ್ಲಿ ಇವುಗಳ ಜೊತೆಗೆ ಇತ್ತೀಚಿನ ಹೊಸ ಕಾನೂನುಗಳನ್ನು ಅಳವಡಿಸಿಕೊಂಡು ಮುನ್ನಡೆಯಲು ಅವಕಾಶ ನೀಡಲಾಗಿದೆ. ಸಹಕಾರಿ ಕ್ಷೇತ್ರ ಇಂದು ಪ್ರತ್ಯೇಕ ಸಚಿವಾಲಯವನ್ನು ಪಡೆಯುವ ಮೂಲಕ ಅದರ ಕಾರ್ಯಚಟುವಟಿಕೆಗಳಿಗೆ ಹೆಚ್ಚಿನ ಉಮ್ಮಸ್ಸು ದೊರಕಿದೆ. ಸಹಕಾರಿ ಕ್ಷೇತ್ರದ ಸರ್ವತೋಮುಖ ಅಭಿವೃದ್ದಿಗೆ ತಾವೆಲ್ಲರೂ ಕೈಜೋಡಿಸಿ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶಿವಮೊಗ್ಗ ಹಾಲು ಒಕ್ಕೂಟದ ನಿರ್ದೇಶಕ ಜಿ.ಪಿ.ಯಶ್ವಂತರಾಜ್, ಇಂದು ನಾಡಿನಾದ್ಯಂತ ಅಖಿಲಭಾರತ ಸಹಕಾರ ಸಪ್ತಾಹ ದಿನಾಚರಣೆಯನ್ನು ಸಂಭ್ರಮ, ಸಡಗರಗಳಿಂದ ಆಚರಣೆ ಮಾಡಲಾಗುತ್ತಿದೆ. ಸಹಕಾರಿ ಕ್ಷೇತ್ರ ಇಂದು ಹೆಚ್ಚು ಆಧುನಿಕತೆಯತ್ತ ಬೆಳವಣಿಗೆಯಾಗಿದೆ. ಈ ಕ್ಷೇತ್ರದಲ್ಲೂ ಸಹ ಹಲವಾರು ಸೌಲಭ್ಯಗಳ ವಿತರಣೆಗೆ ಅವಕಾಶ ಮಾಡಿದೆ, ರೈತರು, ಕಾರ್ಮಿಕರೂ ಸೇರಿದಂತೆ ಎಲ್ಲಾ ವರ್ಗದ ಜನರಿಗೆ ಈ ಕ್ಷೇತ್ರ ನೆರವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಸಹಕಾರಿ ಯೂನಿಯನ್ ಉಪಾಧ್ಯಕ್ಷ ಮಾತೃಶ್ರೀ ಎನ್.ಮಂಜುನಾಥ ಮಾತನಾಡಿ, ಯಾವುದೇ ಸಹಕಾರಿ ಕ್ಷೇತ್ರವಾಗಲಿ ದಕ್ಷತೆ, ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಣೆ ಮಾಡಿದೆ ಮಾತ್ರ ಅದರ ಉಳಿವು ಸಾಧ್ಯ. ಸಹಕಾರಿ ಕ್ಷೇತ್ರದಲ್ಲಿ ನಂಬಿಕೆ, ಪ್ರಾಮಾಣಿಕತೆ ಮುಖ್ಯ. ಎಲ್ಲಿಯತನಕ ನಾವು ಪ್ರಾಮಾಣಿಕರಾಗಿ ದುಡಿಯುತ್ತೇವೆಯೋ ಅಲ್ಲಿಯ ತನಕ ಸಹಕಾರಿ ಕ್ಷೇತ್ರ ಬೆಳವಣಿಗೆಯಾಗುತ್ತದೆ. ಈ ಹಿಂದೆ ಸಹಕಾರಿ ಕ್ಷೇತ್ರದಲ್ಲಿ ಕೇವಲ ಕೆಲವೇ ವರ್ಗಕ್ಕೆ ಮಾತ್ರ ಅಧಿಕಾರಿ ಸೀಮಿತವಾಗಿತ್ತು. ಆದರೆ, ಇಂದು ಸಾರ್ವಜನಿಕವಾಗಿ ಈ ಕ್ಷೇತ್ರದಲ್ಲಿ ಎಲ್ಲರೂ ಅಧಿಕಾರ ಪಡೆಯಬಹುದು. ಸಹಕಾರಿ ಕ್ಷೇತ್ರದ ಏಳಿಗೆ ನಮ್ಮ ಏಳಿಗೆ ಎಂದು ಭಾವಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಜೆ.ಶಿವಪ್ರಕಾಶ್, ಸಹಕಾರ ರತ್ನ ಆರ್. ರಾಮರೆಡ್ಡಿ, ಆಧಿಭಾಸ್ಕರಶೆಟ್ಟಿ, ಕೆಎಂಎಫ್ ನಿರ್ದೇಶಕ ಸಿ.ವೀರಭದ್ರಬಾಬು, ಜಿಂಕಲ್ ಬಸವರಾಜು, ಕೆ.ಎಚ್.ಜಗನ್ನಾಥ, ಆರ್.ಮಲ್ಲೇಶಪ್ಪ, ಪ್ರತಾಪಸಿಂಹ, ಬಿ.ಮಲ್ಲಿಕಾರ್ಜುನ್‌ಪ್ಪ, ವಿನೋದಸ್ವಾಮಿ, ನಾಗರಾಜು, ಶೈಲಪ್ಪ, ಟಿ.ಮಧುಶ್ರೀನಿವಾಸ್, ಎಂ.ಪಿ.ಜಯಪ್ರಕಾಶ್, ಬಷೀರ್‌ಖಾನ್, ದೀಪಕ್, ಸತೀಶ್‌ರೆಡ್ಡಿ, ನಯಾಜ್, ಕೃಷ್ಣಕುಮಾರ್, ಸಂಜಯ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಉಚಿತ ಉಪಹಾರ ವ್ಯವಸ್ಥೆ



» ಚಿತ್ರದುರ್ಗ

ಮಾಜಿ ಪ್ರಧಾನ ಮಂತ್ರಿ ಇಂದಿರಾಗಾಂಧಿಯವರ 106 ನೇ ಜನ್ಮ ದಿನಾಚರಣೆಯ ಅಂಗವಾಗಿ ಜಿಲ್ಲಾ ಮಹಿಳಾ ಕಾಂಗ್ರೆಸ್ ವತಿಯಿಂದ ನಗರದ ಇಂದಿರಾ ಕ್ಯಾಂಟಿನ್‌ನಲ್ಲಿ ಇಂದು ಮಧ್ಯಾಹ್ನ ಉಚಿತವಾಗಿ ಉಪಹಾರ ವ್ಯವಸ್ಥೆಯನ್ನು ಮಾಡಲಾಗಿತ್ತು. ಜಿಲ್ಲಾ ಮಹಿಳಾ ಕಾಂಗ್ರೆಸ್‌ನ ಅಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ ರವರು ಇದರ ಸಾರಥ್ಯವನ್ನು ವಹಿಸಿದ್ದು, ನೆರೆದಿದ್ದ ಜನತೆಗೆ ಇಂದಿರಾಜೀರವರ ಜನ್ಮ ದಿನಾಚರಣೆಯ ಅಂಗವಾಗಿ ಉಪ್ಪಿಟ್ಟು ಮತ್ತು ಕೇಸರಿಬಾತ್ ನ್ನು ವಿತರಣೆ ಮಾಡಿದರು. ಈ ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು, ಪಕ್ಷದ ಕಾರ್ಯಕರ್ತರು ಸಾರ್ವಜನಿಕರು ಸೇರಿದಂತೆ ನೂರಾರು ಜನ ಭಾಗವಹಿಸಿ ಉಪಹಾರವನ್ನು ಸೇವಿಸಿದರು.

### ರೈತರ ಬೆಳೆ ವಿಮೆ, ನಷ್ಟ ಪರಿಹಾರ; ತಾಲ್ಲೂಕು ಕಚೇರಿಗೆ ಮುತ್ತಿಗೆ



» ಚಳ್ಳಕೆರೆ

ಕಳೆದಹಲವಾರುವರ್ಷಗಳಿಂದರೈತಸಮುದಾಯಕ್ಕೆ ನೀಡಬೇಕಾದ ಬೆಳೆ ವಿಮೆ, ನಷ್ಟ ಪರಿಹಾರವನ್ನು ನೀಡದ ಸರ್ಕಾರದ ವಿರುದ್ಧ ಉಗ್ರಪ್ರತಿಭಟನೆ ಕೈಕೊಳ್ಳಲಾಗುವುದಲ್ಲದೆ, ಡಿಸೆಂಬರ್ ಮೊದಲ ವಾರದಲ್ಲಿ ತಾಲ್ಲೂಕು ಕಚೇರಿ ಮುತ್ತಿಗೆ, ಖಾಸಗಿ ವಿಮಾ ಕಂಪನಿಗಳಿಂದ ಬೆಳೆ ವಿಮೆ ವಸೂಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ತಿಳಿಸಿದರು.

ಅವರು, ತಹಶೀಲ್ದಾರ್‌ಗೆ ಮನವಿ ಅರ್ಪಿಸಿ ಮಾತನಾಡಿ, ಬೆಳೆ ವಿಮೆ ಪರಿಹಾರದ ಹಣವನ್ನು ತಕ್ಷಣವೇ ಬಿಡುಗಡೆ ಮಾಡಬೇಕು, ಬೆಳೆ ನಷ್ಟ ಪರಿಹಾರ ವಿತರಣೆಯಾದ ಆದ ಲೋಪ ಸರಿಪಡಿಸಬೇಕು, ಬರಗಾಲ ಹಿನ್ನೆಲೆಯಲ್ಲಿ ರೈತರ ಎಲ್ಲಾ ಸಾಲ ಮನ್ನಾ ಮಾಡಬೇಕು, ಹಗಲು, ರಾತ್ರಿ ವೇಳೆ ತ್ರೀಫೇಸ್‌ನ್ನು 8 ಗಂಟೆಗಳ ಕಾಲ ನೀಡಬೇಕು, ಜಾನುವಾರುಗಳಿಗೆ ಉಚಿತ ಮೇವು ವಿತರಣೆಯಾಗಬೇಕು, ಬಗರ್ ಹುಕ್ಕುಂ ಸಾಗುವಳಿ ಮಾಡಿದ ಎಲ್ಲಾ ರೈತರಿಗೆ ಹಕ್ಕುಪತ್ರ ನೀಡಬೇಕು ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಮನವಿ ನೀಡಿದರು. ಮನವಿ ಸ್ವೀಕರಿಸಿ ಮಾತನಾಡಿದ ಶಿರಸ್ತೇದಾರ್ ಸದಾಶಿವಪ್ಪ, ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಕಳಿಸಿಕೊಡುವ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ಅಧ್ಯಕ್ಷ ಕೆ.ಜೆ.ಶ್ರೀಕಂಠಮೂರ್ತಿ, ಪ್ರಧಾನ ಕಾರ್ಯದರ್ಶಿ ಆರ್.ಬಸವರಾಜು, ಜಿಲ್ಲಾ ಉಪಾಧ್ಯಕ್ಷ ಹಿರೇಹಳ್ಳಿ ಯರ್ರಿಸ್ವಾಮಿ, ಸಹಕಾರ್ಯದರ್ಶಿ ಜಿ.ಎಚ್.ಹನುಮಂತಪ್ಪ, ಐ.ತಿಪ್ಪಾರೆಡ್ಡಿ, ಬೊಮ್ಮಯ್ಯ, ಗೌಡ್ರಚಿಕ್ಕಣ್ಣ, ಆರ್. ಮನೋಹರ, ರತ್ನಮ್ಮ, ಜಯಮ್ಮ, ಜಿ.ಇ.ಸುರೇಶ್, ಕೆ.ಬಿ.ಪಾಲಣ್ಣ, ಕೆ.ಎಸ್.ಪುಟ್ಟಣ್ಣ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಪೌರಕಾರ್ಮಿಕರ ಆರೋಗ್ಯದ ಬಗ್ಗೆ ನಗರಸಭೆ ಹೆಚ್ಚಿನ ಆದ್ಯತೆ



» ಚಳ್ಳಕೆರೆ

ಪ್ರತಿವರ್ಷ ನಗರಸಭೆಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಪೌರಕಾರ್ಮಿಕರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಗುತ್ತದೆ. ಯಾವುದೇ ಪೌರಕಾರ್ಮಿಕ ಅನಾರೋಗ್ಯಕ್ಕೆ ತುತ್ತಾಗದಂತೆ ಜಾಗ್ರತೆ ವಹಿಸಲಾಗುವುದು. ನಗರಸಭೆಯಲ್ಲಿ ಕಾರ್ಯನಿರ್ವಹಿಸುವ ಸುಮಾರು 80ಕ್ಕೂ ಹೆಚ್ಚು ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸಲಾಗಿದೆ ಎಂದು ಪೌರಾಯುಕ್ತ ಸಿ.ಚಂದ್ರಪ್ಪ ತಿಳಿಸಿದರು. ಅವರು, ನಗರಸಭೆಯ ರಮಾಬಾಯಿಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು. ಪೌರಕಾರ್ಮಿಕರು ಪ್ರತಿನಿತ್ಯ ಬೆಳಗ್ಗೆಯಿಂದ ಸಂಜೆರವರೆಗೂ ಸ್ವಚ್ಛತೆಯೂ ಸೇರಿದಂತೆ ಹಲವಾರು ಕಾರ್ಯದಲ್ಲಿ ಭಾಗವಹಿಸುತ್ತಾರೆ.

## ಜಿಲ್ಲಾಧಿಕಾರಿಗಳಿಂದ ವಿವಿಧ ಮತಗಟ್ಟೆಗಳಿಗೆ ಭೇಟಿ: 17 ವರ್ಷ ತುಂಬಿದವರಿಂದಲೂ ಅರ್ಜಿ ಪಡೆಯಲು ಸೂಚನೆ

# ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಅಭಿಯಾನ


» ಚಿತ್ರದುರ್ಗ

ಭಾರತ ಚುನಾವಣಾ ಆಯೋಗದ ಸೂಚನೆಯಂತೆ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯಕ್ರಮ ಅಭಿಯಾನದಡಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಾಲ್ಲೂಕಿನ ವಿವಿಧ ಮತಗಟ್ಟೆಗಳಿಗೆ ಆಕಸ್ಮಿಕ ಭೇಟಿ ನೀಡಿ ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಕಾರ್ಯವೈಖರಿಯನ್ನು ಪರಿಶೀಲಿಸಿದರು, ಅಲ್ಲದೆ 17 ವರ್ಷ ತುಂಬಿದವರಿಂದಲೂ ಮತದಾರರ ಪಟ್ಟಿಗೆ ಹೆಸರು ಸೇರಿಸಲು ಅರ್ಜಿ ಪಡೆದುಕೊಳ್ಳಬೇಕು ಎಂದು ಸೂಚನೆ ನೀಡಿದರು.

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಆರಂಭಗೊಂಡಿದ್ದು, 18 ವರ್ಷ ವಯಸ್ಸು ಪೂರ್ಣಗೊಂಡವರು ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಅಲ್ಲದೆ ಈಗಾಗಲೆ ಪಟ್ಟಿಯಲ್ಲಿರುವವರ ಹೆಸರು ಮತ್ತಿತರ ತಿದ್ದುಪಡಿ, ಸ್ಥಳಾಂತರ, ಹೀಗೆ ವಿವಿಧ ಪರಿಷ್ಕರಣೆ ಕಾರ್ಯವನ್ನು ಕೈಗೊಳ್ಳಲು ಅವಕಾಶ ನೀಡಲಾಗಿದೆ.

ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ವಿಶೇಷ ಅಭಿಯಾನ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾಧಿಕಾರಿಗಳು ದೊಡ್ಡಸಿದ್ದವ್ವನಹಳ್ಳಿ, ಜೆ.ಎನ್. ಕೋಟೆ, ಕುಂಚಿಗನಾಳ್, ಗೊಲ್ಲರಹಟ್ಟಿ ಸೇರಿದಂತೆ ವಿವಿಧ ಮತಗಟ್ಟೆಗಳಿಗೆ ತೆರಳಿ ಪರಿಶೀಲನೆ ನಡೆಸಿದರು, ಅಲ್ಲದೆ ಬಿಎಲ್‌ಒ ಅವರಿಂದ





ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದ ಅಗತ್ಯ ಮಾಹಿತಿ ಪಡೆದುಕೊಂಡರು. ಈಗಾಗಲೆ ಮತದಾರರ ಕರಡು ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಮತದಾರರು ಪಟ್ಟಿಯಲ್ಲಿ ತಮ್ಮ ಹೆಸರು ಇದೆಯೇ, ಅಥವಾ ಏನಾದರೂ ತಪ್ಪಾಗಿದೆಯೇ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಬೂತ್ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ಜನಸಂಖ್ಯೆ ಆಧಾರದಲ್ಲಿ ಅಂದಾಜು ಶೆ. 70 ರಷ್ಟು ಜನರು 18 ವರ್ಷಕ್ಕೂ ಮೇಲ್ಪಟ್ಟವರು ಇರುತ್ತಾರೆ, ಇವರೆಲ್ಲರೂ ಮತದಾರರ ಪಟ್ಟಿಗೆ ಸೇರ್ಪಡೆಯಾಗಬೇಕು, ಅರ್ಹತಾ ದಿನವನ್ನು ಇದೀಗ ವರ್ಷಕ್ಕೆ 04 ನಿಗದಿಪಡಿಸಿದ್ದು, ಹೀಗಾಗಿ 17 ವರ್ಷ ವಯಸ್ಸು ಆದವರ ಅರ್ಜಿಯನ್ನೂ ಕೂಡ ಪಡೆಯಬಹುದಾಗಿದ್ದು, ಅಂತಹವರ ಅರ್ಜಿಯನ್ನು ಪಡೆದು, ಅವರಿಗೆ 18 ವರ್ಷ ಪೂರ್ಣಗೊಂಡ ಬಳಿಕ ಅಂತಹವರ ಹೆಸರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಕ್ರಮ ಕೈಗೊಳ್ಳಬೇಕು, ಮತದಾನದ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸಿ, ಅಕ್ಕಪಕ್ಕದ ಮನೆಗಳ ಯುವ ಮತದಾರರ ನೊಂದಣಿಗೆ ಕರೆ ನೀಡಲು ಸಾರ್ವಜನಿಕರಲ್ಲಿ ಮನವಿ ಮಾಡಬೇಕು, ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮುಂಬರುವ ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮತಗಟ್ಟೆಗಳಲ್ಲಿನ ಮೂಲಭೂತ ಸೌಕರ್ಯಗಳನ್ನೂ ಕೂಡ ಉತ್ತಮ ಸ್ಥಿತಿಗತಿಯಲ್ಲಿ ಇರಿಸಿಕೊಳ್ಳಬೇಕು, ಯಾವುದೇ ಸಮಸ್ಯೆಗಳಿದ್ದಲ್ಲಿ ಉನ್ನತ ಅಧಿಕಾರಿಗಳಿಗೆ ತಿಳಿಸಿ, ಸರಿಪಡಿಸುವ ಕಾರ್ಯ ಆಗಬೇಕು ಎಂದು ತಾಕೀತು ಮಾಡಿದರು.

ವಿವಿಧ ಗ್ರಾಮಗಳ ಮತಗಟ್ಟೆಗಳಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಇದೇ ಸಂದರ್ಭದಲ್ಲಿ 18 ವರ್ಷ ಹಾಗೂ 17 ವರ್ಷ ಪೂರ್ಣಗೊಂಡವರಿಂದ ನಮೂನೆ–06 ಅನ್ನು ಪಡೆದು, ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸುವ ಕಾರ್ಯಕ್ಕೆ ಚಾಲನೆ ನೀಡಿದರು.

ಅಲ್ಲದೆ ಗ್ರಾಮಸ್ಥರೊಂದಿಗೆ ಸಮಾಲೋಚನೆ ನಡೆಸಿದ ಅವರು, ಗ್ರಾಮದಲ್ಲಿ ಯಾರೂ ಕೂಡ ಅರ್ಹರು ಮತದಾರರ ಪಟ್ಟಿಯಿಂದ ಹೊರಗುಳಿಯಬಾರದು, ಮತದಾರರು, ಪಟ್ಟಿಯಲ್ಲಿ ತಮ್ಮ ಹೆಸರು ಇರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಮತದಾರರ ಗುರುತಿನ ಕಾರ್ಡ್‌ಗಳನ್ನು ನೇರವಾಗಿ ಆಯಾ ಮತದಾರರ ಮನೆಯ ವಿಳಾಸಕ್ಕೆ ಪೋಸ್ಟ್ ಮೂಲಕವೇ ತಲುಪಿಸಲಾಗುವುದು. ಯಾವುದೇ ಸಮಸ್ಯೆ ಅಥವಾ ಗೊಂದಲಗಳಿದ್ದಲ್ಲಿ ಟೋಲ್ ಫ್ರೀ ಸಂಖ್ಯೆ 1950 ಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ತಹಸಿಲ್ದಾರ್ ನಾಗವೇಣಿ ಸೇರಿದಂತೆ ಆಯಾ ಬೂತ್ ಮಟ್ಟದ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಮಕ್ಕಳು ಮೊಬೈಲ್ ಬಿಟ್ಟು ಕ್ರೀಡೆಯಲ್ಲಿ ಸದೃಢರಾಗಿ

» ಚಿತ್ರದುರ್ಗ

ಇಂದಿನ ದಿನಮಾನದಲ್ಲಿ ಮಕ್ಕಳು ಮೊಬೈಲ್ ಬಿಟ್ಟು ಆಟದ ಮೈದಾನದಲ್ಲಿ ಆಡುವುದರ ಮೂಲಕ ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಲು ಸಾಧ್ಯವಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್ ತಿಳಿಸಿದರು.

ನಗರದ ಪಾರ್ಶ್ವನಾಥ್ ವಿದ್ಯಾ ಸಂಸ್ಥೆಯವತಿಯಿಂದ ನಗರದ ಓನಕೆ ಓಬವ್ವ ಕ್ರೀಡಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಗರದ ಪಾರ್ಶ್ವನಾಥ್ ಸಂಸ್ಥೆ ತನ್ನದೆ ಆದ ಮೌಲ್ಯವನ್ನು ಹೊಂದಿದೆ. ಶಿಕ್ಷಣದ ಜೊತೆಗೆ ಮಾನವೀಯ ಮೌಲ್ಯಗಳನ್ನು ಕಲಿಸುತ್ತಿದ್ದಾರೆ. ತಮ್ಮ ದುಡಿಮೆಯ ಜೊತೆಗೆ ಸಮಾಜ ಸೇವೆಯಾಗಿ ವಿದ್ಯಾ ದಾನವನ್ನು ಮಾಡುತ್ತಾ ಮಕ್ಕಳಿಗೆ ಶಿಕ್ಷಣವನ್ನು ನೀಡುತ್ತಿದ್ದಾರೆ. ಶಿಕ್ಷಕರು ಸಹಾ ತಮ್ಮ ಶಾಲೆಯಲ್ಲಿ ಉತ್ತಮವಾದ ಮಕ್ಕಳನ್ನು ನಿರ್ಮಾಣ ಮಾಡಬೇಕಿದೆ ಎಂದರು.

ಮಕ್ಕಳು ತಮ್ಮ ವಿದ್ಯಾಭ್ಯಾಸದ ಜೊತೆಗೆ ಸರ್ವಾಂಗೀಣ ಅಭೀವೃದ್ದಿಗೆ ಹೆಚ್ಚಿನ ಶ್ರಮವನ್ನು ಹಾಕಬೇಕಿದೆ. ಜಿಲ್ಲಾ, ತಾಲ್ಲೂಕು ಹೋಬಳಿ ಮಟ್ಟದ ಕ್ರೀಡಾಕೂಟದಲ್ಲಿ ಬಾಗವಹಿಸುವುದರ ಮೂಲಕ ತಮ್ಮ ಪ್ರತಿಭೆಯನ್ನು ಪ್ರದರ್ಶನ ಮಾಡಬೇಕಿದೆ. ಇದರೊಂದಿಗೆ ಶಾಲಾ ಮಟ್ಟದಲ್ಲಿ ನಡೆಯುವ ಕ್ರೀಡಾಕೂಟದಲ್ಲಿ ಸಹಾ ಭಾಗವಹಿಸಬೇಕಿದೆ ಎಂದ ಅವರು, ಮಕ್ಕಳು ಇಂದಿನ ದಿನಮಾನದಲ್ಲಿ ಕ್ರೀಡೆಯಲ್ಲಿ ಭಾಗವಹಿಸುವುದು ಕಡಿಮೆಯಾಗಿದೆ. ಮೊಬೈಲ್‌ನಲ್ಲಿ ಹೆಚ್ಚಿನ ಸಮಯವನ್ನು ಕಳೆಯುತ್ತಿದ್ದಾರೆ. ಇದರಿಂದ ಮಾನಸಿಕ ಮತ್ತು



ದೈಹಿಕವಾಗಿ ಸದೃಢವಾಗುವುದಿಲ್ಲ ಎಂದು ನಾಗಭೂಷಣ ತಿಳಿಸಿದರು.

ಇಂದಿನ ದಿನಮಾನದಲ್ಲಿ ಮಕ್ಕಳು ದೈಹಿಕವಾಗಿ ಕಸರತ್ತುಮಾಡುವುದುಕಡಿಮೆಯಾಗಿದೆ. ಇದರಿಂದ ಈ ರೀತಿಯ ಕ್ರೀಡಾಕೂಟದಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ಮಾನಸಿಕ ಮತ್ತು ದೈಹಿಕವಾಗಿ ಸದೃಢರಾಗಲು ಸಾಧ್ಯವಿದೆ. ಪಠ್ಯದ ಜೊತೆಗೆ ಕ್ರೀಡೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದನ್ನು ಕಲಿಯಬೇಕಿದೆ ಇದರಿಂದ ಮನಸ್ಸು ಮತ್ತು ದೇಹ ಚನ್ನಾಗಿ ಇರಲು ಸಾಧ್ಯವಿದೆ ಎಂದರು.

ನಿವೃತ್ತ ದೈಹಿಕ ನಿರ್ದೇಶಕರಾದ ಜಯ್ಯಣ್ಣ ಮಾತನಾಡಿ, ಜೈನ್ ಸಮುದಾಯದವರು ಮಕ್ಕಳಿಗೆ ಶಿಕ್ಷಣವನ್ನು ಕೂಡಿಸುವುದರ ಮೂಲಕ ಉತ್ತಮವಾದ ಸೇವೆಯನ್ನು ಮಾಡುತ್ತಿದ್ದಾರೆ. ಮಕ್ಕಳು ದೈಹಿಕವಾಗಿ ಚನ್ನಾಗಿ ಇದ್ದರೆ ಉತ್ತಮವಾದ ಸಾಧನೆಯನ್ನು ಮಾಡಲು ಸಾಧ್ಯವಿದೆ. ಮೊಬೈಲ್‌ನಿಂದ ಮಕ್ಕಳು ಮಾನಸಿಕವಾಗಿ ಹಿನ್ನಡೆಯನ್ನು ಸಾಧಿಸುತ್ತಾರೆ. ದೇಶವು ಸಹಾ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದೆ ಎಂದರು.

ಪಾರ್ಶನಾಥ್ ವಿದ್ಯಾ ಸಂಸ್ಥೆಯ ಆಧ್ಯಕ್ಷರಾದ ಬಾಬುಲಾಲ್ ಮಾತನಾಡಿ, ಮಕ್ಕಳು ಶಿಕ್ಷಣವನ್ನು ಪಡೆಯುವುದರ ಜೊತೆಗೆ ಕ್ರೀಡೆಗೂ ಸಹಾ ಮಹತ್ವವನ್ನು ನೀಡಬೇಕಿದೆ. ಕ್ರೀಡಾ ಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಮೂಲಕ ಮಾನಸಿಕವಾಗಿ ಸದೃಢವಾಗಿರುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ಉತ್ತಮಚಂದ್ ನೀರವ್, ಕಾರ್ಯದರ್ಶಿ ಆಶೋಕ ಕುಮಾರ್, ನಿರ್ದೇಶಕರಾದ ಜುನಾರಿಲಾಲ್, ಸುರೇಶ್ ಮುತ್ತಾ, ಮುಕೇಶ್ ಸೇರಿದಂತೆ ಶಾಲಾ ಶಿಕ್ಷಕರು ಸಿಬ್ಬಂದಿಗಳು ಹಾಜರಿದ್ದರು.

## ಪ್ರಸ್ತುತ ಕಾಂಗ್ರೆಸ್ ಆಡಳಿತದ ನೇತೃತ್ವದ ಸರ್ಕಾರ ಶಾಪಗ್ರಸ್ತ ಸರ್ಕಾರವಾಗಿದೆ: ರಂಗಸ್ವಾಮಿ



» ಚಳ್ಳಕೆರೆ

ಪ್ರಸ್ತುತ ರಾಜ್ಯದಲ್ಲಿ ಕಳೆದ ಆರು ತಿಂಗಳಿನಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವದ ಸರ್ಕಾರದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದ ರೈತರ ಸಮಸ್ಯೆಗಳ ಬಗ್ಗೆ ನಿರ್ಲಕ್ಷ್ಯಧೋರಣೆ ತಾಳಿದ್ದಾರೆ. ರೈತರ ಬೆಳೆವಿಮೆ, ಬೆಳೆನಷ್ಟ ಪರಿಹಾರ ನೀಡುವಲ್ಲಿ ಸರ್ಕಾರ ಧೋರಣೆ ಖಂಡಿಸಿ ನ.20ರ ಸೋಮವಾರ ರಸ್ತೆ ತಡೆ ಚಳುವಳಿ ನಡೆಸಿ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಅಖಂಡ ಕರ್ನಾಟಕ ರೈತ ಸಂಘ ರಾಜ್ಯ ಪ್ರಧಾನ ಕಾರ್ಯದರ್ಶಿ ಸೋಮಗುದ್ದು ರಂಗಸ್ವಾಮಿ ತಿಳಿಸಿದರು. ಅವರು, ನಗರ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ರೈತರಿಗೆ ಖಾಸಗಿ ವಿಮಾ ಕಂಪನಿಗಳಿಂದ ಬೆಳೆನಷ್ಟ ಪರಿಹಾರದ ಹಣ ದೊರಕಿಲ್ಲ, ಬೆಳೆ ವಿಮೆಯ ಪಾವತಿಯ ಬಗ್ಗೆ ಸರ್ಕಾರದಿಂದ ನಿರ್ದೇಶನವಿಲ್ಲ, ರೈತರಿಗೆ ನೀಡಬೇಕಾದ ಬೆಳೆ ನಷ್ಟದಲ್ಲೂ ಸಹ ಲಕ್ಷಾಂತರ ಅವ್ಯವಹಾರವಾದ ಬಗ್ಗೆ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಈ ಮುಷ್ಕರ ನಡೆಸಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕಾರ್ಯಾಧ್ಯಕ್ಷ ಹನುಮಂತರಾಯ, ಅಧ್ಯಕ್ಷ ಕೆ.ಚಿಕ್ಕಣ್ಣ, ಉಪಾಧ್ಯಕ್ಷ ಜಂಪಣ್ಣ, ಪ್ರಧಾನ ಕಾರ್ಯದರ್ಶಿ ಪ್ರಕಾಶ್, ಹೋಬಳಿ ಅಧ್ಯಕ್ಷ ನವೀನ್‌ಗೌಡ, ಖಾದರ್‌ಭಾಷ, ನಾಗೇಂದ್ರಪ್ಪಜಾಲಿ, ತಿಮ್ಮಣ್ಣ, ವೃಷಬೇಂದ್ರಪ್ಪ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಗೃಹ ಸಚಿವರ ವಿಶೇಷ ಕರ್ತವ್ಯಾಧಿಕಾರಿ ಡಾ.ನಾಗಣ್ಣರಿಗೆ ಸನ್ಮಾನ

**ಹಿರಿಯೂರು :** ಗೃಹಸಚಿವರ ವಿಶೇಷಕರ್ತವ್ಯಾಧಿಕಾರಿ ಡಾ.ನಾಗಣ್ಣನವರ ಕರ್ತವ್ಯನಿಷ್ಟೆ, ಪ್ರಾಮಾಣಿಕತೆ ಮತ್ತು ಸಮಾಜಮುಖಿ ಸೇವೆಯನ್ನು ಮೆಚ್ಚಿ ಗೃಹ ಸಚಿವರ ವಿಶೇಷ ಕರ್ತವ್ಯಾಧಿಕಾರಿಯಾಗಿ ನೇಮಿಸಿರುವುದು ನಮಗೆಲ್ಲ ತುಂಬಾ ಸಂತೋಷ ತಂದಿದೆ ಎಂಬುದಾಗಿ ಕುಂಚಿಟಿಗ ಕುಲಶಾಸ್ತ್ರ ಅಧ್ಯಯನಕಾರ ಎಸ್.ವಿ.ರಂಗನಾಥ್ ಹೇಳಿದರು. ತಾಲ್ಲೂಕಿನ ವಾಣಿವಿಲಾಸ ಸಾಗರ ಜಲಾಶಯದ ಮುಂಭಾಗದಲ್ಲಿರುವ ಕಣಿವೆ ಮಾರಮ್ಮ ದೇವಸ್ಥಾನಕ್ಕೆ ಆಗಮಿಸಿದ ಗೃಹಸಚಿವರ ವಿಶೇಷಕರ್ತವ್ಯಾಧಿಕಾರಿ ಶಿರಾ ತಾಲ್ಲೂಕು ರಾಗಲಹಳ್ಳಿ ಗ್ರಾಮದ ಡಾ.ನಾಗಣ್ಣ,ನವರಿಗೆ ಹಿರಿಯೂರು ತಾಲ್ಲೂಕು ಕುಂಚಿಟಿಗರ ಕ್ಷೇಮಾಭಿವೃದ್ಧಿ ಸಂಘ ಮತ್ತು ಕರ್ನಾಟಕ ರಾಜ್ಯ ಕುಂಚಿಟಿಗರ ಒಕ್ಕೂಟದ ವತಿಯಿಂದ ಶಾಲು ಹೊದಿಸಿ ಮೈಸೂರು ಪೇಟತೊಡಿಸಿ ಸನ್ಮಾನಿಸಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ ಕುಂಚಿಟಿಗ ರಾಜ್ಯ ಒಕ್ಕೂಟದ ಅಧ್ಯಕ್ಷ ಕಸವನಹಳ್ಳಿರಮೇಶ್, ತಾಲ್ಲೂಕು ಕುಂಚಿಟಿಗರ ಕ್ಷೇಮಾಭಿವೃದ್ಧಿ ಸಂಘದ ಪ್ರಧಾನ ಕಾರ್ಯದರ್ಶಿ ವಿ.ಕುಬೇರಪ್ಪ, ಪೆಪ್ಸಿ ಹನುಮಂತರಾಯ ಉಪಸ್ಥಿತರಿದ್ಧರು.



## ಪ್ರಮುಖ ಸುದ್ದಿ

# ಒಕ್ಕಲಿಗ ಜಪ ಮಾಡುವ ಕುಂಚಿಟಿಗ ಮುಖಂಡರ ಬಗ್ಗೆ ಎಚ್ಚರವಹಿಸಿ

» ಹಿರಿಯೂರು

ಕುಂಚಿಟಿಗ ಸಮಾಜದ ಹೆಸರಿನಲ್ಲಿ ವೈಯಕ್ತಿಕ ಲಾಭ ಮಾಡಿಕೊಂಡು ಸ್ವಹಿತಾಸಕ್ತಿ ಕಾಪಾಡಿಕೊಳ್ಳುವ ಧಾರ್ಮಿಕ ನೇತಾರರು ಮತ್ತು ರಾಜಕೀಯ ಧುರೀಣರು ಕೇವಲ ಸರ್ಕಾರಿ ಅನುದಾನ ಮತ್ತು ಚುನಾವಣೆ ಟಿಕೆಟ್ ಗಾಗಿ ಒಕ್ಕಲಿಗ ಜಪ ಮಾಡುತ್ತ ಕುಂಚಿಟಿಗರಿಗೆ ಕಳೆದ 27 ವರ್ಷಗಳಿಂದ ಶೈಕ್ಷಣಿಕವಾಗಿ, ರಾಜಕೀಯವಾಗಿ, ಸಾಮಾಜಿಕವಾಗಿ ಆರ್ಥಿಕವಾಗಿ, ಔದ್ಯೋಗಿಕವಾಗಿ ನಿರಂತರವಾಗಿ ಶೋಷಣೆ ಮಾಡುತ್ತ ಬಂದಿರುತ್ತಾರೆಂದು ಕುಂಚಿಟಿಗರ ರಾಜ್ಯ ಒಕ್ಕೂಟದ ಅಧ್ಯಕ್ಷ ಕಸವನಹಳ್ಳಿರಮೇಶ್ ಗಂಭೀರ ಆರೋಪ ಮಾಡಿದ್ದಾರೆ.

ಕುಂಚಿಟಿಗರಿಗೆ ಕೇಂದ್ರ ಸರ್ಕಾರದಲ್ಲಿದ್ದ ಓಬಿಸಿ ಮೀಸಲಾತಿಯನ್ನು ಉದ್ದೇಶ ಪೂರ್ವಕವಾಗಿ ತೆಗೆದು ಹಾಕಿಸಿ ,ಕುಂಚಿಟಿಗರೆಲ್ಲ ಒಕ್ಕಲಿಗ ಎಂದು ಬರೆಯಿಸಿ ಓಬಿಸಿ ಮೀಸಲಾತಿ ಪಡೆಯಿರಿ ಎಂದು ಕಾನೂನು ಬಾಹಿರ ಉಪದೇಶ ಮಾಡಿದ ಧಾರ್ಮಿಕ ನೇತಾರರು ಮತ್ತು ರಾಜಕೀಯ ಧುರೀಣರ ಮಾತು ಕೇಳಿ ಬಹುತೇಕ ರೈತಾಪಿ ಕುಂಚಿಟಿಗರು ತಂದೆ ಜಾತಿ ಕುಂಚಿಟಿಗ ಇದ್ದಾಗ್ಯೂ ಮಕ್ಕಳಿಗೆ ಒಕ್ಕಲಿಗ ಎಂದು ಬರೆಯಿಸಿ,ಸಿಕ್ಕಂತ ನೌಕರಿ,ಗೆದ್ದ ರಾಜಕೀಯ ಸ್ಥಾನಮಾನಗಳನ್ನು ಕಳೆದುಕೊಂಡಿದ್ದಾರೆ.

ಅಷ್ಟೇ ಅಲ್ಲದೆ ನಕಲಿ ಜಾತಿಪತ್ರ ಪಡೆದ ಆರೋಪದಡಿ ಕಾನೂನಾತ್ಮಕ ತೊಂದರೆ ಅನುಭವಿಸುವಂತಾಗಿದೆ. ಆದಾಗ್ಯೂ ಚುನಾವಣೆ ಹತ್ತಿರ ಬರುತ್ತಿದ್ದಂತೆ ಕುಂಚಿಟಿಗ ನೆಲದಲ್ಲಿ ಒಕ್ಕಲಿಗ ಜಪ ಮಾಡುವ ಚಾಣಕ್ಯರು ಜಯಂತಿ ಮತ್ತು ಪ್ರತಿಮೆ ಸ್ಥಾಪನೆ ಹೆಸರಿನಲ್ಲಿ ಭಾವನಾತ್ಮಕ ತಂತ್ರಗಾರಿಕೆ ಮಾಡಿ ಕುಂಚಿಟಿಗರನ್ನು ಆಡಕತ್ತರಿಗೆ ಸಿಲುಕಿಸುವ ಕೆಲಸವನ್ನು ನಿರಂತರವಾಗಿ ಮಾಡುತ್ತ ಬಂದಿರುತ್ತಾರೆ.



ಅಂತವರು ತಮ್ಮ ಜಾತಿ ಪ್ರಮಾಣ ಪತ್ರವನ್ನು ಪಡೆದು ದಾಖಲೆ ಸಹಿತ ಮನೆ ದೇವರು ಮತ್ತು ಕುಲ ಬೆಡಗು ಸಹಿತ ತಮ್ಮ ಬಯೋಡೇಟಾ ಬಹಿರಂಗ ಪಡಿಸಲಿ ಎಂದು ಕಸವನಹಳ್ಳಿ ರಮೇಶ್ ಸವಾಲು ಹಾಕಿದ್ದಾರೆ. ಇನ್ನು ಮುಂದೆ ಕುಂಚಿಟಿಗರನ್ನು ಕಡೆಗಣಿಸಿ ಒಕ್ಕಲಿಗ ಮಂತ್ರ ಜಪಿಸುವವವರಿಗೆ ಸ್ವಾಭಿಮಾನಿ ಕುಂಚಿಟಿಗರು ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕು. ಇಂತವರಿಗೆ ಹೆಣ್ಣು ಕೊಟ್ಟರೆ,ನಾಳೆ ನಿಮ್ಮ ಮಕ್ಕಳು ಮೊಮ್ಮಕ್ಕಳು,ಜಾತಿ ಸಿಂಧುತ್ವ ಸಿಗದೆ ತೊಂದರೆ ಅನುಭವಿಸಬೇಕಾಗುತ್ತದೆ ಎಂದು ತಿಳಿಸಿದರು.

ಕಳೆದ 27 ವರ್ಷಗಳಿಂದ ಕೇಂದ್ರ ಓಬಿಸಿ ಮೀಸಲಾತಿ ತಪ್ಪಿಸಿ ಮೀಸಲಾತಿ ಆಸೆಗಾಗಿ ಅನ್ಯ ಜಾತಿಗಳತ್ತ ಮುಖ ಮಾಡಿದ್ದ ಕುಂಚಿಟಿಗರಿನ್ನು ಇಕ್ಕಟ್ಟಿಗೆ ಸಿಲುಕಿಸಿ,ಈಗ ಕುಲ ಶಾಸ್ತ್ರ ಅಧ್ಯಯನ ವರದಿ ಯಥಾವತ್ ಜಾರಿ ಮಾಡದೇ ಗ್ರಾಮೀಣ ಮತ್ತು ನಗರ ಕುಂಚಿಟಿಗ ಎಂದು ಇಬ್ಭಾಗ ಮಾಡಿ ಕುಂಚಿಟಿಗರಿಗೆ ಕೈ ಬಿಟ್ಟು ಹೋದ ಕೇಂದ್ರ ಓಬಿಸಿ ಮೀಸಲಾತಿ ಕೊಡಿಸುವ ನೆಪದಲ್ಲಿ ನಗರ ಕುಂಚಿಟಿಗರಿಗೆ ಕೇಂದ್ರ ಓಬಿಸಿ ಮೀಸಲಾತಿ ತಪ್ಪಿಸಿ ಗಾಯದ ಮೇಲೆ ಬರೆ ಎಳೆಯಲಾಗಿದೆ.ಇನ್ನು ಮುಂದೆ ನಗರ ಕುಂಚಿಟಿಗರಿಗೆ ಇಡಬ್ಲೂಎಸ್ ಮೀಸಲಾತಿ ಕೂಡ ಕೈ ಬಿಟ್ಟು ಹೋಗಿ ಜನರಲ್ ಮೆರಿಟ್ ನಲ್ಲಿ ಬರುತ್ತಾರೆ. ಇದಕ್ಕೆಲ್ಲ ಟಿ.ಬಿ.ಜಯಚಂದ್ರರವರು ನೇರ ಹೊಣೆ ಎಂದು ಕಸವನಹಳ್ಳಿ ರಮೇಶ್ ತಿಳಿಸಿದರು.

ರಾಜ್ಯ ಸರ್ಕಾರದ ಕರಾಳ ತೀರ್ಮಾನವನ್ನು ಕರ್ನಾಟಕ ರಾಜ್ಯದ 18 ಜಿಲ್ಲೆ 46 ತಾಲ್ಲೂಕುಗಳ ಕೇಂದ್ರ ಸ್ಥಾನದಲ್ಲಿ ವಾಸಿಸುವ ನಗರ ಕುಂಚಿಟಿಗರು ನಿಮ್ಮ ಜಿಲ್ಲೆ ಮತ್ತು ತಾಲ್ಲೂಕುಗಳಲ್ಲಿರುವ ಕುಂಚಿಟಿಗ ಸಂಘ ಸಂಸ್ಥೆಗಳ ಮುಖಂಡರುಗಳನ್ನು ಸೇರಿಸಿ ಪತ್ರಿಕಾ ಗೋಷ್ಠಿ ಕರೆದು ಕುಂಚಿಟಿಗ ಕುಲಶಾಸ್ತ್ರ ಅಧ್ಯಯನ ವರದಿ ಯಥಾವತ್ ಜಾರಿಗಾಗಿ ಒತ್ತಾಯ ಮಾಡಬೇಕೆಂದು ಕುಂಚಿಟಿಗರ ರಾಜ್ಯ ಒಕ್ಕೂಟದ ಅಧ್ಯಕ್ಷ ಕಸವನಹಳ್ಳಿರಮೇಶ್ ಮನವಿ ಮಾಡಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T